ಸಂಪುಟ: 11 ಸಂಚಿಕೆ: 152 ಪುಟ: 4+2 ಬೆಲೆ : 3.00 ಭಾನುವಾರ ಜುಲೈ 19, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 152 Pages : 4+2 Rate : 3.00 Sunday July 19, 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಜಿ.ಪಂ. ಸಾಮಾನ್ಯ ಸಭೆಯಲ್ಲಿ ಕ್ರಿಯಾ ಯೋಜನೆಗೆ ಅನುಮೋದನೆ- ಅನುದಾನದ ಸದ್ಬಳಕೆ, ಗುಣಮಟ್ಟದ ಸೇವೆಗೆ ಒತ್ತು: ಡಾ. ಎಂ.ವಿ. ವೆಂಕಟೇಶ್

# ಪ್ರತಿಯೊಂದು ರೂಪಾಯಿ ಅರ್ಹರಿಗೇ ತಲುಪಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದಿಂದ ಬಿಡುಗಡೆಯಾಗುವ ಪ್ರತಿಯೊಂದು ರೂಪಾಯಿಯೂ ಸಾರ್ವಜನಿಕರ ಹಿತಕ್ಕಾಗಿ ಸಮರ್ಪಕವಾಗಿ ಬಳಕೆಯಾಗಬೇಕು. ಯಾವುದೇ ಕಾರಣಕ್ಕೂ ಅನುದಾನ ಅಪವ್ಯಯವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ, ಸರ್ಕಾರದ ಯೋಜನೆಗಳ ಲಾಭ ನೇರವಾಗಿ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಡಾ. ಎಂ.ವಿ. ವೆಂಕಟೇಶ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್‌ನಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಪ್ರಸಕ್ತ ಸಾಲಿನ ಜಿಲ್ಲಾ ಪಂಚಾಯತ್ ಅನುದಾನದ ಕ್ರಿಯಾ ಯೋಜನೆ, ಜಿಲ್ಲಾ ವಲಯದಡಿ ವಲಯವಾರು ಅನುದಾನ ಹಂಚಿಕೆ ಹಾಗೂ ವಿವಿಧ ಇಲಾಖೆಗಳ ಯೋಜನೆಗಳಿಗೆ ಅನುಮೋದನೆ ನೀಡಲಾಯಿತು. ಜಿಲ್ಲಾ ಪಂಚಾಯತ್‌ನಲ್ಲಿ ಶೇ.60ರಷ್ಟು ಅನುದಾನವನ್ನು ವೇತನಕ್ಕಾಗಿ ಹಾಗೂ ತಾಲೂಕು ಪಂಚಾಯಿತಿಗಳಿಗೆ ನೀಡಿದ ಅನುದಾನದಲ್ಲಿ ಶೇ.95ರಷ್ಟು ಮೊತ್ತವನ್ನು



ವೇತನಕ್ಕಾಗಿ ಮೀಸಲಿಡಲು ಸಭೆಯಲ್ಲಿ ಅನುಮೋದನೆ ದೊರೆಯಿತು.

ಇಲಾಖಾವಾರು ರೂಪಿಸಲಾದ ಯೋಜನೆಗಳ ಕುರಿತು ಸುದೀರ್ಘ ಪರಿಶೀಲನೆ ನಡೆಸಿದ ಡಾ. ವೆಂಕಟೇಶ್, ಅಕ್ಷರ ದಾಸೋಹ ಯೋಜನೆಯಡಿ ಶಾಲಾ ಮಕ್ಕಳಿಗೆ ಗುಣಮಟ್ಟದ ಆಹಾರ ಪೂರೈಕೆಯಾಗುವಂತೆ ನಿರಂತರ ಮೇಲ್ವಿಚಾರಣೆ ನಡೆಸಬೇಕು ಎಂದು ಸೂಚಿಸಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಭಾರತ್ ಜೋಡೋ ಯುವಕ ಮಂಡಳಗಳ ಸ್ಥಾಪನೆಗೆ ಹೆಚ್ಚಿನ ಆದ್ಯತೆ ನೀಡುವಂತೆಯೂ ನಿರ್ದೇಶಿಸಿದರು.

ಆರೋಗ್ಯ ಇಲಾಖೆಯ ಕಾರ್ಯವೈಖರಿ ಪರಿಶೀಲಿಸಿದ ಅವರು, ಆಸ್ಪತ್ರೆಗಳಲ್ಲಿ ಗುಣಮಟ್ಟದ ಚಿಕಿತ್ಸೆ, ಅಗತ್ಯ ಔಷಧಗಳ ಸಮರ್ಪಕ ಖರೀದಿ ಹಾಗೂ ಲಭ್ಯತೆ ಖಚಿತಪಡಿಸಿಕೊಳ್ಳಬೇಕು ಎಂದರು. ಚೀನಾ ನಿರ್ಮಿತ ಬೆಡ್‌ಗಳ ಖರೀದಿಯನ್ನು ತಪ್ಪಿಸುವಂತೆ ಸೂಚಿಸಿದ ಅವರು, ಗುಣಮಟ್ಟದ ಔಷಧ ಖರೀದಿಯಲ್ಲಿ ನಿರ್ಲಕ್ಷ್ಯ ಕಂಡುಬಂದರೆ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಆಯುಷ್ ಇಲಾಖೆಗೆ ಹಿಂದಿನ ಸಭೆಯಲ್ಲಿ ಔಷಧ ಖರೀದಿಗಾಗಿ ನೀಡಿದ್ದ ಅನುದಾನದ ಬಳಕೆ ಕುರಿತು ಮಾಹಿತಿ ಪಡೆದು, ಅನುದಾನವನ್ನು ಸಮರ್ಪಕವಾಗಿ ಬಳಸುವಂತೆ ಸೂಚಿಸಿದರು. ಜಿಲ್ಲೆಯ ಎಲ್ಲ ಆರ್‌ಒ ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ನಿರ್ವಹಣೆ ಕೈಗೊಂಡು, ಲಿಂಕ್ ಯೋಜನೆಯ ಉದ್ದೇಶ ಯಶಸ್ವಿಯಾಗಬೇಕು

> ಸರ್ಕಾರದ ಯೋಜನೆಗಳು ಕಾಗದದಲ್ಲಷ್ಟೇ ಉಳಿಯಬಾರದು. ಸರ್ಕಾರದ ಪ್ರತಿಯೊಂದು ರೂಪಾಯಿ ಅರ್ಹ ಫಲಾನುಭವಿಗೆ ತಲುಪಬೇಕು. ಅನುದಾನದ ಸದ್ಬಳಕೆ, ಪಾರದರ್ಶಕತೆ ಹಾಗೂ ಗುಣಮಟ್ಟದ ಸೇವೆ ನೀಡುವಲ್ಲಿ ಅಧಿಕಾರಿಗಳು ಯಾವುದೇ ರಾಜಿ ಮಾಡಿಕೊಳ್ಳಬಾರದು. ನಿರ್ಲಕ್ಷ್ಯ ಕಂಡುಬಂದರೆ ಹೊಣೆಗಾರ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.
>
> – **ಡಾ. ಎಂ.ವಿ. ವೆಂಕಟೇಶ್, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ**, ಜಿಲ್ಲಾಧ್ಯಕ್ಷ, ಕರ್ನಾಟಕ ರಕ್ಷಣಾ ವೇದಿಕೆ (ಎಚ್. ಶಿವರಾಮೇಗೌಡ ಬಣ)

ಎಂದು ಹೇಳಿದರು.

ಸಾಮಾಜಿಕ ಅರಣ್ಯ ಇಲಾಖೆಯ ಕಾರ್ಯವೈಖರಿ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಅವರು, ಆರ್‌ಎಫ್‌ಒಗಳು ವಿಬಿಜಿ ರಾಮ್‌ಜಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಸ್ಥಳೀಯ ಹವಾಮಾನಕ್ಕೆ ಹೊಂದುವ ಗಿಡಗಳನ್ನು ಬೆಳೆಸುವಂತೆ ಸೂಚಿಸಿದರು.

ಪ್ರತಿ ತಾಲೂಕಿನಲ್ಲಿ ಮಿಯಾವಾಕಿ ಅರಣ್ಯ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಬೇಕು. ಶಾಲಾ ಆವರಣಗಳಲ್ಲಿ ಕರಿಬೇವು, ನಿಂಬೆ, ನೆಲ್ಲಿ

> ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ನೀಡಿರುವ ಎಲ್ಲ ನಿರ್ದೇಶನಗಳನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು. ಪ್ರತಿಯೊಂದು ಇಲಾಖೆಯ ಕಾರ್ಯಪ್ರಗತಿಯನ್ನು ನಿರಂತರವಾಗಿ ಪರಿಶೀಲಿಸಿ, ಅನುದಾನದ ಸಮರ್ಪಕ ಬಳಕೆ ಹಾಗೂ ಜನಸೇವೆಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.
>
> – **ಸಿ.ಎನ್. ಶ್ರೀಧರ್**, ಡಿಸಿ

ಹಾಗೂ ಪಪ್ಪಾಯಿ ಗಿಡಗಳನ್ನು ಕಡ್ಡಾಯವಾಗಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ಅರಣ್ಯ ಇಲಾಖೆಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ಡಿಡಿಪಿಐ ಆರ್.ಎಸ್. ಬುರಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

---

## ವಿದ್ಯಾರ್ಥಿಗಳೇ ದೇಶದ ಭವಿಷ್ಯದ ಆಧಾರಸ್ತಂಭ



**ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ವಿದ್ಯಾರ್ಥಿಗಳೇ ನಾಳಿನ ದೇಶದ ಆಧಾರಸ್ತಂಭಗಳಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಸ್ಪಷ್ಟ ಗುರಿ ಹೊಂದಿ ಅದನ್ನು ಸಾಧಿಸಲು ನಿರಂತರ ಪರಿಶ್ರಮ ಪಡಬೇಕು. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಭಾಗವಹಿಸಿ ವ್ಯಕ್ತಿತ್ವ ವಿಕಸನ ಮಾಡಿಕೊಳ್ಳಬೇಕು ಎಂದು ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ನಗರದ ಆಂಗ್ಲೋ ಉರ್ದು ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡಾ ಹಾಗೂ ಮತದಾರರ ಸಾಕ್ಷರತಾ ಸಂಘಗಳ ಉದ್ಘಾಟನೆ, ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌರವಾಧ್ಯಕ್ಷ ಸರ್ಫರಾಜ್ ಅಹ್ಮದ್ ಎಸ್. ಉಮಚಗಿ ಮಾತನಾಡಿ, ವಿದ್ಯಾರ್ಥಿಗಳು ಭಾಷೆಯನ್ನು ಪ್ರೀತಿಸಿ ಅದರ ಮೇಲೆ ಪಾಂಡಿತ್ಯ ಬೆಳೆಸಿಕೊಳ್ಳಬೇಕು. ಗುಣ-ಅವಗುಣಗಳನ್ನು ಅರಿತು ಅವಗುಣಗಳನ್ನು ತೊರೆದು ಉತ್ತಮ ನಡೆ-ನುಡಿ, ಆಚಾರ-ವಿಚಾರ ಮತ್ತು ಸಂಸ್ಕೃತಿಯನ್ನು ಅಳವಡಿಸಿಕೊಳ್ಳಬೇಕು. ಪ್ರಾಮಾಣಿಕ ಪರಿಶ್ರಮದಿಂದ ಉತ್ತಮ ಅಂಕ ಗಳಿಸುವುದರ ಜೊತೆಗೆ ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಹೇಳಿದರು.

ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕ ಪ್ರೊ. ಎ.ಎಂ. ಮುಲ್ಲಾ ಮಾತನಾಡಿ, ಜೀವನ ಕೇವಲ ಬದುಕುವುದಕ್ಕಲ್ಲ, ಸಾಧನೆ ಮಾಡುವುದಕ್ಕಾಗಿದೆ. ವಿದ್ಯಾರ್ಥಿಗಳು ಗೌರವ, ಪ್ರೀತಿ, ಸ್ವ-ನಿಯಂತ್ರಣ, ನಂಬಿಕೆ, ಏಕಾಗ್ರತೆ, ಸತ್ಯ ಹಾಗೂ ದೃಢ ನಿರ್ಧಾರದಂತಹ ಸದ್ಗುಣಗಳನ್ನು ಬೆಳೆಸಿಕೊಂಡು ಸಮಾಜದ ಆಸ್ತಿಯಾಗಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮವು ಕು. ಸನಾ ನದಾಫ ಅವರ ಕುರಾನ್ ಪಠಣದೊಂದಿಗೆ ಆರಂಭವಾಯಿತು. ಕು. ಫಾತಿಮಾ ಗುಳಗುಂದಿ ಹಮ್ದ್ ಹಾಡಿದರೆ, ಕು. ಆಫ್ರೀನ್ ಸಂಕಲಪುರ ಸಾಥ್ ನೀಡಿದರು. ಕು. ಕವಿತಾ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಐ.ಪಿ. ಹಾದಿಮನಿ ಸ್ವಾಗತಿಸಿದರು. ಎಂ.ಎಂ. ಶಿರಹಟ್ಟಿ ಅತಿಥಿಗಳನ್ನು ಪರಿಚಯಿಸಿದರು. ಶ್ರೀಮತಿ ಎಸ್.ಎ. ಬಾರೂದವಾಲೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಸಿಕೊಟ್ಟರು. ಶ್ರೀಮತಿ ಎಸ್.ಎಸ್. ಪಾಟೀಲ ವಂದಿಸಿದರು. ಕು. ಮಾರಿಯಾ ಕಿಫ್ತೆ ಎಸ್. ಮಿರ್ಜಿ ಹಾಗೂ ಕು. ಸಮೀನಾ ಆರ್. ಮುಲ್ಲಾ ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿಯ ಉಪಾಧ್ಯಕ್ಷ ಹಾಜಿ ಎ.ಎಂ. ಸೌದಾಗರ, ಸದಸ್ಯರಾದ ಜನಾಬ್ ಶಾಹನವಾಜ್ ಎಸ್. ಉಮಚಗಿ, ಹಾಜಿ ರಾಜೇಸಾಬ ಬಾಗಲಕೋಟ, ಜನಾಬ್ ಜೆ.ಬಿ. ಉಮಚಗಿ, ಹಾಜಿ ಎಂ.ಎ. ಹಣಗಿ, ಜನಾಬ್ ಎಸ್.ಎ. ಬಿಜಾಪೂರ ಹಾಗೂ ಅತಿಥಿಯಾಗಿ ಜನಾಬ್ ಶಾಮಾಜ್ ಎಸ್. ಉಮಚಗಿ ಉಪಸ್ಥಿತರಿದ್ದರು. ಮಹಾವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---

## ನೀಟ್ ಹಗರಣ ವಿರೋಧಿಸಿ ಪ್ರತಿಭಟನೆ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ನೀಟ್ ಪರೀಕ್ಷೆ ಹಗರಣದ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು ಹಾಗೂ ನೀಟ್ ಪರೀಕ್ಷೆಯಿಂದ ಮಾನಸಿಕವಾಗಿ ನೊಂದ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ತಲಾ ₹1 ಕೋಟಿ ಪರಿಹಾರ ನೀಡಬೇಕು ಎಂದು ಸೌಹಾರ್ದ ಕರ್ನಾಟಕ ವೇದಿಕೆ ಆಗ್ರಹಿಸಿತು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಶನಿವಾರ ಸೌಹಾರ್ದ ಕರ್ನಾಟಕ ವೇದಿಕೆ ತಾಲೂಕು ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ದೆಹಲಿಯ ಜಂತರ್ ಮಂತರ್‌ನಲ್ಲಿ ಕಳೆದ 20 ದಿನಗಳಿಂದ ಅಮರಣಾಂತ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಪರಿಸರವಾದಿ ಸೋನಂ ವಾಂಗ್‌ಚುಕ್ ಅವರಿಗೆ ಬೆಂಬಲ ವ್ಯಕ್ತಪಡಿಸಲಾಯಿತು.

ಪ್ರತಿಭಟನಾಕಾರರು ಮಾತನಾಡಿ, ಸೋನಂ ವಾಂಗ್‌ಚುಕ್ ಕಳೆದ 20 ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದರೂ ಕೇಂದ್ರ ಸರ್ಕಾರ ಅವರೊಂದಿಗೆ ಮಾತುಕತೆ ನಡೆಸದೇ ನಿರ್ಲಕ್ಷ್ಯ ವಹಿಸಿರುವುದು ಖಂಡನೀಯ ಎಂದರು. ಪ್ರತಿಭಟನೆಗೆ ಬಿ. ಮಾಳಮ್ಮ ನೇತೃತ್ವ ವಹಿಸಿದ್ದರು. ಸಿಐಟಿಯು ಮುಖಂಡ ಆರ್.ಎಸ್. ಬಸವರಾಜ್, ಜಗನ್ನಾಥ್, ಕೆ. ಗಾಳೆಪ್ಪ, ಕೆ. ರಮೇಶ್, ಎಸ್‌ಎಫ್‌ಐ ಮುಖಂಡ ಜಯಸೂರ್ಯ, ಪಿ. ಚಾಂದ್ ಬಿ., ಸೈಯದ್, ಇರ್ಫಾನ್ ಇದ್ದರು.

---

### ಕುಡಿಯುವ ನೀರು, ಮೇವು, ಉದ್ಯೋಗಕ್ಕೆ ಮೊದಲ ಆದ್ಯತೆ, ರೈತರು ಬೆಳೆ ವಿಮೆಯಿಂದ ವಂಚಿತರಾಗದಂತೆ ಕ್ರಮಕ್ಕೆ ಸಚಿವ ಈಶ್ವರ ಖಂಡ್ರೆ ನಿರ್ದೇಶನ

# ಬರ ಎದುರಿಸಲು ತುರ್ತು ಕ್ರಮಕ್ಕೆ ಸೂಚನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಗ್ರಾಮೀಣ ಜನರಿಗೆ ಉದ್ಯೋಗದ ಕೊರತೆ ಉಂಟಾಗದಂತೆ ಜಿಲ್ಲಾಡಳಿತ ತುರ್ತು ಮತ್ತು ಸಮರೋಪಾದಿಯಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಗದಗ ಜಿಲ್ಲಾ ಪ್ರಕೃತಿ ವಿಕೋಪ ಮೇಲುಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶನಿವಾರ ಜನಪ್ರತಿನಿಧಿಗಳು ಹಾಗೂ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ವರ್ಚುವಲ್ ಸಭೆ ನಡೆಸಿದ ಸಚಿವರು, ರಾಜ್ಯದಲ್ಲಿ ಉಂಟಾಗಿರುವ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯ ಕುರಿತು ಮುಖ್ಯಮಂತ್ರಿ, ಭಾನುವಾರ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ನಡೆಸಲಿದ್ದು, ಗದಗ ಜಿಲ್ಲೆಯ ಸ್ಥಿತಿಯನ್ನು ವಿಶೇಷವಾಗಿ ಪ್ರಸ್ತಾಪಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ತೀವ್ರ ಮಳೆ ಕೊರತೆಯಾಗಿರುವುದರಿಂದ ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಜಿಲ್ಲೆ ಎಂದು ಘೋಷಿಸಿ ಪರಿಹಾರ ಕಾಮಗಾರಿಗಳನ್ನು ಆರಂಭಿಸಬೇಕು ಎಂದು ಶಾಸಕರು ಹಾಗೂ ಜನಪ್ರತಿನಿಧಿಗಳು ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪರಿಸ್ಥಿತಿ ಪರಿಶೀಲನೆ ನಡೆಯುತ್ತಿದ್ದು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ವರದಿ ಆಧರಿಸಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು. ಸಮಸ್ಯೆ ಎದುರಾದ ತಕ್ಷಣ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು. ಬರದ ಪರಿಣಾಮವಾಗಿ ಗ್ರಾಮೀಣ ಜನರು ಉದ್ಯೋಗ ಅರಸಿ ವಲಸೆ ಹೋಗದಂತೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಸೇರಿದಂತೆ ಲಭ್ಯವಿರುವ ಎಲ್ಲ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಸಚಿವರು ಸೂಚಿಸಿದರು.

ಜಲಜೀವನ ಮಿಷನ್ ಹಾಗೂ ವಿಬಿಜಿ ರಾಮ್‌ಜಿ ಯೋಜನೆಯಡಿ ಲಭ್ಯವಿರುವ ಅನುದಾನವನ್ನು ಬಳಸಿಕೊಂಡು ಕುಡಿಯುವ ನೀರಿನ ಕಾಮಗಾರಿಗಳನ್ನು ವಿಳಂಬವಿಲ್ಲದೆ ಕೈಗೊಳ್ಳಬೇಕು. ಜನರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮುಂಗಾರು ಪೂರ್ವ ಉತ್ತಮ ಮಳೆಯಿಂದ



> ಗದಗ ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು. ಬರದಿಂದ ಜನರು ವಲಸೆ ಹೋಗದಂತೆ ಉದ್ಯೋಗಕ್ಕೂ ಮೊದಲ ಆದ್ಯತೆ ನೀಡಬೇಕು.
>
> – **ಈಶ್ವರ ಬಿ. ಖಂಡ್ರೆ**, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಜಿಲ್ಲೆಯಲ್ಲಿ ಶೇ.82ರಷ್ಟು ಬಿತ್ತನೆ ನಡೆದಿದ್ದರೂ ನಂತರ ಮಳೆ ಕೊರತೆಯಿಂದ ಹೆಸರು, ಮೆಕ್ಕೆಜೋಳ ಸೇರಿದಂತೆ ಹಲವು ಬೆಳೆಗಳು ಒಣಗುತ್ತಿವೆ. ಇಂತಹ ಸಂದರ್ಭದಲ್ಲಿ ರೈತರಿಗೆ ಬೆಳೆ ವಿಮೆ ಅತ್ಯಗತ್ಯವಾಗಿದ್ದು, ಸಾಲದ ಕಾರಣಕ್ಕೆ ಯಾರೂ ವಿಮೆಯಿಂದ ವಂಚಿತರಾಗಬಾರದು ಎಂದು ಸಚಿವರು ಹೇಳಿದರು.

ಕಟ್ ಬಾಕಿ ಹಾಗೂ ಒನ್‌ಟೈಮ್ ಸೆಟಲ್‌ಮೆಂಟ್ (ಒಟಿಎಸ್) ಮಾಡಿಕೊಂಡಿರುವ ರೈತರಿಗೆ ಹೊಸ ಖಾತೆ ತೆರೆಯುವ ಮೂಲಕ ಬೆಳೆ ವಿಮೆ ಕಂತು ಪಾವತಿಸಲು ಅವಕಾಶ ಕಲ್ಪಿಸುವಂತೆ ಲೀಡ್ ಬ್ಯಾಂಕ್ ಹಾಗೂ ಡಿಸಿಸಿ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಶಾಸಕ ಎಚ್.ಕೆ. ಪಾಟೀಲ್, ರೈತರು ಬೆಳೆ ಸಾಲ ಮರುಪಾವತಿಸಿಲ್ಲ ಎಂಬ ಕಾರಣಕ್ಕೆ ಬೆಳೆ ವಿಮೆಯಿಂದ ವಂಚಿತರಾಗಬಾರದು ಎಂದು ಆಗ್ರಹಿಸಿದರು. ಶಾಸಕರಾದ ಜಿ.ಎಸ್. ಪಾಟೀಲ್, ಸಿ.ಸಿ. ಪಾಟೀಲ್, ಡಾ. ಚಂದ್ರು ಲಮಾಣಿ ಹಾಗೂ ಎಸ್.ವಿ. ಸಂಕನೂರು ಅವರು ಜಿಲ್ಲೆಯ ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾಹಿತಿ ನೀಡಿ, ಜನವರಿಯಿಂದ ಜುಲೈ 17ರವರೆಗೆ ವಾಡಿಕೆ 229.5 ಮಿ.ಮೀ. ಮಳೆಗೆ ವಿರುದ್ಧವಾಗಿ 227.2 ಮಿ.ಮೀ. ಮಳೆಯಾಗಿದ್ದರೂ, ಜುಲೈ 1ರಿಂದ 17ರವರೆಗೆ ವಾಡಿಕೆ 36.4 ಮಿ.ಮೀ. ಮಳೆಗೆ ಕೇವಲ 21.6 ಮಿ.ಮೀ. ಮಳೆಯಾಗಿದ್ದು, ಶೇ.41ರಷ್ಟು ಮಳೆ ಕೊರತೆ ದಾಖಲಾಗಿದೆ ಎಂದು ತಿಳಿಸಿದರು.

2026-27ರ ಮುಂಗಾರು ಹಂಗಾಮಿನಲ್ಲಿ 3,13,719 ಹೆಕ್ಟೇರ್ ಬಿತ್ತನೆ ಗುರಿಯಲ್ಲಿ 2,57,401 ಹೆಕ್ಟೇರ್ (ಶೇ.82.05) ಪ್ರದೇಶದಲ್ಲಿ ಬಿತ್ತನೆ ಪೂರ್ಣಗೊಂಡಿದೆ. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ 37,059 ಅರ್ಜಿಗಳ ಮೂಲಕ 38,388 ಹೆಕ್ಟೇರ್ ಪ್ರದೇಶ ವಿಮೆಗೆ ಒಳಪಡಿಸಲಾಗಿದೆ ಎಂದರು.

ಪ್ರವಾಹ ಮುನ್ನೆಚ್ಚರಿಕಾ ಕ್ರಮವಾಗಿ ಮಲಪ್ರಭಾ ಹಾಗೂ ತುಂಗಭದ್ರಾ ನದಿ ಪಾತ್ರದ 20 ಗ್ರಾಮಗಳನ್ನು ಸೂಕ್ಷ್ಮ ಪ್ರದೇಶಗಳಾಗಿ ಗುರುತಿಸಿ 43 ಕಾಳಜಿ ಕೇಂದ್ರಗಳನ್ನು ಸಿದ್ಧಪಡಿಸಲಾಗಿದೆ. ತುರ್ತು ರಕ್ಷಣಾ ಕಾರ್ಯಕ್ಕಾಗಿ 51 ಈಜುಗಾರರನ್ನು ಸನ್ನದ್ಧ ಸ್ಥಿತಿಯಲ್ಲಿ ಇರಿಸಲಾಗಿದೆ. ಮಳೆ ಹಾಗೂ ಸಿಡಿಲಿನಿಂದ ಮೃತಪಟ್ಟ ನಾಲ್ವರು ಸಂತ್ರಸ್ತರ ಕುಟುಂಬಗಳಿಗೆ ತಲಾ ₹5 ಲಕ್ಷದಂತೆ ಒಟ್ಟು ₹20 ಲಕ್ಷ ಪರಿಹಾರ ವಿತರಿಸಲಾಗಿದ್ದು, ಭಾಗಶಃ ಹಾನಿಗೊಳಗಾದ 20 ಮನೆಗಳಿಗೆ ₹1.30 ಲಕ್ಷ ಪರಿಹಾರ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.

**ಗದಗ ಜಿಲ್ಲೆಯ ಬರ ಪರಿಸ್ಥಿತಿ**

- ಜುಲೈನಲ್ಲಿ ಕೊರತೆ: ಶೇ.41
- 2.57 ಲಕ್ಷ ಹೆಕ್ಟೇರ್ (82.05%) ಬಿತ್ತನೆ
- ಬೆಳೆ ವಿಮೆ ಅರ್ಜಿಗಳು: 37,059
- ವಿಮೆ ವ್ಯಾಪ್ತಿ: 38,388 ಹೆಕ್ಟೇರ್
- ಸೂಕ್ಷ್ಮ ಪ್ರವಾಹ ಗ್ರಾಮಗಳು: 20
- ಕಾಳಜಿ ಕೇಂದ್ರಗಳು: 43
- ತುರ್ತು ಕಾರ್ಯಕ್ಕೆ ಸನ್ನದ್ಧ ಈಜುಗಾರರು: 51
- ಸಿಡಿಲು/ಮಳೆ ಪರಿಹಾರ: 4 ಕುಟುಂಬಗಳಿಗೆ ₹20 ಲಕ್ಷ

---

### ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದ ಮಾಧ್ಯಮಿಕ ಶಾಲಾ ನೌಕರರ ಸಂಘ

# ಹಳೆ ಪಿಂಚಣಿ ಯೋಜನೆ ಜಾರಿಗೊಳಿಸಿ




**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಅವರಿಗೆ ಹಳೆ ಪಿಂಚಣಿ ಯೋಜನೆ (ಒಪಿಎಸ್) ಕಡ್ಡಾಯವಾಗಿ ಜಾರಿಗೊಳಿಸುವಂತೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿದ ಬಳಿಕ ಸಂಘದ ಜಿಲ್ಲಾಧ್ಯಕ್ಷ ಎಂ.ಕೆ. ಲಮಾಣಿ ಮಾತನಾಡಿ, 2006ರ ನಂತರ ನೇಮಕಗೊಂಡ ಸಿಬ್ಬಂದಿಗೆ ಒಪಿಎಸ್ ಜಾರಿಯಿಲ್ಲದ ಕಾರಣ, 60 ವರ್ಷಗಳ ಕಾಲ ನಿಷ್ಠೆಯಿಂದ ಸೇವೆ ಸಲ್ಲಿಸಿ ನಿವೃತ್ತಿಯಾಗುವ ನೌಕರರಿಗೆ ವೃದ್ಧಾಪ್ಯದಲ್ಲಿ ನಿಶ್ಚಿತ ಪಿಂಚಣಿ ಸೌಲಭ್ಯ ದೊರೆಯದಿರುವುದು ಆಘಾತಕಾರಿ ಹಾಗೂ ಖೇದಕರ ಸಂಗತಿಯಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಅನೇಕ ಜನೋಪಯೋಗಿ ಯೋಜನೆಗಳನ್ನು ಜಾರಿಗೆ ತಂದು ಸಾಮಾನ್ಯ ಜನರ ಆಶ್ರಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಹಳೆ ಪಿಂಚಣಿ ಯೋಜನೆ ಜಾರಿಗೊಳಿಸುವ ಭರವಸೆಯನ್ನೂ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಲಾಗಿತ್ತು. ಆ ಭರವಸೆಯ ಮೇರೆಗೆ ನೌಕರರು ಸರ್ಕಾರಕ್ಕೆ ಸಂಪೂರ್ಣ ಬೆಂಬಲ ನೀಡಿ ಸರ್ಕಾರ ರಚನೆಗೆ ಕಾರಣರಾಗಿದ್ದಾರೆ. ಆದ್ದರಿಂದ ಸರ್ಕಾರ ತನ್ನ ಮಹತ್ವದ ಯೋಜನೆಗಳಲ್ಲಿ ಒಪಿಎಸ್ ಜಾರಿಯನ್ನು ಮೊದಲ ಆದ್ಯತೆಯಾಗಿ ಪರಿಗಣಿಸಿ ಕೂಡಲೇ ಜಾರಿಗೆ ತರಬೇಕು ಎಂದು ಅವರು ಆಗ್ರಹಿಸಿದರು.

ಹಲವಾರು ನೌಕರರ ಸಭೆ-ಸಮಾರಂಭಗಳಲ್ಲಿ ಮುಖ್ಯಮಂತ್ರಿ ಎಲ್ಲರಿಗೂ ನಿಶ್ಚಿತ ಪಿಂಚಣಿ

> 2006ರ ನಂತರ ನೇಮಕಗೊಂಡ ನೌಕರರಿಗೂ ಹಳೆ ಪಿಂಚಣಿ ಯೋಜನೆ ಜಾರಿಗೊಳಿಸಿ ನಿವೃತ್ತಿ ಜೀವನಕ್ಕೆ ಆರ್ಥಿಕ ಭದ್ರತೆ ಒದಗಿಸಬೇಕು. ಸರ್ಕಾರ ನೀಡಿದ್ದ ಭರವಸೆಯನ್ನು ಈಡೇರಿಸಬೇಕು.
>
> – **ಎಂ.ಕೆ. ಲಮಾಣಿ,** ಜಿಲ್ಲಾಧ್ಯಕ್ಷ, ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ

ನೀಡುವುದು ಅನಿವಾರ್ಯ ಎಂದು ಹೇಳಿರುವುದನ್ನು ಉಲ್ಲೇಖಿಸಿದ ಅವರು, ಸರ್ಕಾರದ ದಿಟ್ಟ ನಿರ್ಧಾರಗಳಿಂದ ಅನೇಕ ಯೋಜನೆಗಳು ಯಶಸ್ವಿಯಾಗಿ ಜಾರಿಯಾಗಿರುವಂತೆ, ಲಕ್ಷಾಂತರ ನೌಕರರ ಬಹುದಿನಗಳ ಬೇಡಿಕೆಯಾಗಿರುವ ಒಪಿಎಸ್ ಯೋಜನೆಯನ್ನೂ ತಕ್ಷಣದಿಂದಲೇ ಜಾರಿಗೊಳಿಸಿ ನೌಕರರಿಗೆ ಆಸರೆಯಾಗಬೇಕು ಎಂದು ಮನವಿ ಮಾಡಿದರು.

ಎಸ್.ವಿ. ಸಂಕನೂರ, ಮೋಹನ ಲಿಂಬಿಕಾಯಿ, ರವಿ ಬಿ. ದಂಡಿನ, ಎ.ಎಸ್. ಪಾಟೀಲ (ಪ್ರಧಾನ ಕಾರ್ಯದರ್ಶಿ), ಬಿ.ಡಿ. ಯರಗೊಪ್ಪ, ದನೇಶ ನಾಯಕ, ಡಿ.ಜಿ. ಪೂಜಾರ, ಮಂಜುನಾಥ ತೆಗ್ಗಿನಮನಿ, ಬಿ.ಸಿ. ಗುಳೇದ, ಟಿ.ಆರ್. ನಾಯಕ, ಪಿ.ಎನ್. ಹಿರೇಮಠ, ಶರಣು ಡಣಾಪೂರ, ಝೆಡ್.ಎಂ. ಖಾಜಿ, ಆರ್.ವಿ. ಗೊಂಡಬಾಳ, ಬೂದಪ್ಪ ಅಂಗಡಿ, ಬಿ.ಕೆ. ನಿಂಬನಗೌಡ್ರ, ಬಿ.ಎಚ್. ಕೊರ್ಲಹಳ್ಳಿ, ಹೆಚ್.ಟಿ. ಬಿಜ್ಜೂರ, ಎಲ್.ಎಸ್. ಅರಳಹಳ್ಳಿ, ಗಿರೀಶ ಸುಗಜನಾವರ, ಮಹೇಶ ಕೇರಿ, ಆರ್.ಎಚ್. ನರೇಗಲ್ಲ, ಸುನೀಲ ಲಮಾಣಿ, ಡಿ.ಎನ್. ಮರಡ್ಡಿ ಉಪಸ್ಥಿತರಿದ್ದರು.

---

## ಎಸ್‌ಐಆರ್ ಕರ್ತವ್ಯದಿಂದ ಶಿಕ್ಷಕರನ್ನು ಬಿಡುಗಡೆ ಮಾಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ಕೆ ನಿಯೋಜಿಸಲಾಗಿರುವ ಸರ್ಕಾರಿ ಶಾಲಾ ಶಿಕ್ಷಕರನ್ನು ಆದಷ್ಟು ಬೇಗ ಚುನಾವಣಾ



ಕರ್ತವ್ಯದಿಂದ ಬಿಡುಗಡೆ ಮಾಡಿ, ತಮ್ಮ ಮೂಲ ಶಾಲೆಗಳಿಗೆ ಮರಳಿಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಸಾಮಾಜಿಕ ಕಾರ್ಯಕರ್ತ ಸೈಯದ್ ಖಾಲಿದ್ ಕೊಪ್ಪಳ ಪತ್ರ ಬರೆದು ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜ್ಯದ ಅನೇಕ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೀವ್ರ ಅಡಚಣೆ ಉಂಟಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಶಾಲೆಗಳು ಆರಂಭವಾಗಿ ಸುಮಾರು ಒಂದು ತಿಂಗಳು ಕಳೆದರೂ ಸಾವಿರಾರು ಸರ್ಕಾರಿ ಶಾಲೆಗಳ ಮಕ್ಕಳು ಸಮರ್ಪಕ ಬೋಧನೆಯಿಂದ ವಂಚಿತರಾಗಿದ್ದಾರೆ ಎಂದು ಹೇಳಿದ್ದಾರೆ.

ಎಸ್‌ಐಆರ್ ಪ್ರಕ್ರಿಯೆಯ ನೆಪದಲ್ಲಿ ಸರ್ಕಾರಿ ಶಾಲೆಗಳ ಶಿಕ್ಷಣ ವ್ಯವಸ್ಥೆಗೆ ಧಕ್ಕೆಯಾಗಬಾರದು. ಶಿಕ್ಷಕರನ್ನು ದೀರ್ಘಾವಧಿಯವರೆಗೆ ಚುನಾವಣಾ ಕರ್ತವ್ಯಕ್ಕೆ ಬಳಸುವುದರಿಂದ ಸರ್ಕಾರಿ ಶಾಲೆಗಳ ಮೇಲಿನ ಸಾರ್ವಜನಿಕರ ವಿಶ್ವಾಸಕ್ಕೂ ಧಕ್ಕೆ ಉಂಟಾಗುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯದಲ್ಲಿ ವಿದ್ಯಾವಂತ ನಿರುದ್ಯೋಗಿ ಯುವಕರ ಸಂಖ್ಯೆ ಹೆಚ್ಚಿದ್ದು, ಅಗತ್ಯವಿದ್ದಲ್ಲಿ ಚುನಾವಣಾ ಆಯೋಗವು ಅಂತಹ ಯುವಕರ ಸೇವೆಯನ್ನು ಬಳಸಿಕೊಂಡು ಚುನಾವಣಾ ಕಾರ್ಯಗಳನ್ನು ನಿರ್ವಹಿಸಬಹುದು. ಇದರಿಂದ ಶಿಕ್ಷಣ ವ್ಯವಸ್ಥೆಗೆ ಯಾವುದೇ ತೊಂದರೆಯಾಗುವುದಿಲ್ಲ ಎಂದರು. ಎಸ್‌ಐಆರ್ ಎನ್ಯುಮರೇಷನ್ ಫಾರ್ಮ್‌ಗಳ ಸಲ್ಲಿಕೆ ಅವಧಿ ವಿಸ್ತರಣೆಯಾಗಿರುವ ಹಿನ್ನೆಲೆಯಲ್ಲಿ ಮತದಾರರು ವಿಳಂಬ ಮಾಡದೆ ತಮ್ಮ ಬಳಿ ಇರುವ ಫಾರ್ಮ್‌ಗಳನ್ನು ಕೂಡಲೇ ಸಂಬಂಧಿಸಿದ ಬೂತ್ ಮಟ್ಟದ ಅಧಿಕಾರಿ (ಬಿಎಲ್‌ಒ)ಗಳಿಗೆ ಸಲ್ಲಿಸಬೇಕು ಎಂದು ಸೈಯದ್ ಖಾಲಿದ್ ಕೊಪ್ಪಳ ಮನವಿ ಮಾಡಿದ್ದಾರೆ.

---

## 2.33 ಲಕ್ಷಕ್ಕೂ ಅಧಿಕ ಫಾರ್ಮ್ ವಿತರಣೆ; 1.31 ಲಕ್ಷ ಡಿಜಿಟಲೀಕರಣ ಪೂರ್ಣ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ವಿಧಾನಸಭಾ ಮತಕ್ಷೇತ್ರದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಚುರುಕುಗೊಂಡಿದ್ದು, ಜುಲೈ 17ರವರೆಗೆ 2,33,829 ಎನ್ಯುಮರೇಷನ್ ಫಾರ್ಮ್‌ಗಳನ್ನು ಮತದಾರರಿಗೆ ವಿತರಿಸಲಾಗಿದೆ.

ಮತಕ್ಷೇತ್ರದಲ್ಲಿ ಒಟ್ಟು 2,33,829 ಮತದಾರರು ಹಾಗೂ 226 ಮತಗಟ್ಟೆಗಳಿದ್ದು, ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುತ್ತಿದ್ದಾರೆ.

ಈ ಕಾರ್ಯವು ಆಗಸ್ಟ್ 8ರವರೆಗೆ ಮುಂದುವರಿಯಲಿದೆ.

ಈವರೆಗೆ 1,31,113 ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದೆ ಎಂದು ಮತದಾರರ ನೋಂದಣಾಧಿಕಾರಿಗಳು ಹಾಗೂ ಗದಗ ಉಪವಿಭಾಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೊಟ್ಟೆ ನರಗಳ ಆರೋಗ್ಯ ಮತ್ತು ಸ್ಮರಣಶಕ್ತಿ ವೃದ್ಧಿ!

ಮೊಟ್ಟೆಯ ಹಳದಿ ಭಾಗದಲ್ಲಿ ಕೋಲೀನ್ ಎಂಬ ಮಹತ್ವದ ಪೋಷಕಾಂಶವಿದೆ. ಮೆದುಳಿನ ಕಾರ್ಯ, ನರಗಳ ಆರೋಗ್ಯ ಮತ್ತು ಸ್ಮರಣಶಕ್ತಿ ವೃದ್ಧಿಗೆ ಈ ಪೋಷಕಾಂಶ ತುಂಬಾ ಅವಶ್ಯವಾಗಿದೆ ಎಂದು ಆರೋಗ್ಯ ತಜ್ಞರು ಹೇಳುತ್ತಾರೆ.ಹಲವರಿಗೆ ಮೊಟ್ಟೆಗಳನ್ನು ಕೇಂದ್ರೀಕರಿಸಿದ ಉಪಹಾರದೊಂದಿಗೆ ದಿನ ಆರಂಭವಾಗುತ್ತದೆ. ಫಿಟ್ನೆಸ್ ಉತ್ಸಾಹಿಗಳಿಂದ ಹಿಡಿದು ಮಕ್ಕಳವರೆಗೆ, ಇದು ಎಲ್ಲರೂ ಆನಂದಿಸುವ ಆಹಾರವಾಗಿದೆ. ಮೊಟ್ಟೆಗಳನ್ನು ಸೇವಿಸುವಾಗ ಅನೇಕ ಜನರು ಒಂದು ನಿರ್ದಿಷ್ಟ ಹಿಂಜರಿಕೆಯನ್ನು ಅನುಭವಿಸುತ್ತಾರೆ. ಈ ಹಿಂಜರಿಕೆಗೆ ಪ್ರಾಥಮಿಕ ಕಾರಣವೆಂದರೆ ಮೊಟ್ಟೆಯ ಹಳದಿ ಭಾಗದಲ್ಲಿ ಕೊಬ್ಬು ಅಧಿಕವಾಗಿದೆ ಎಂಬ ಸಾಮಾನ್ಯ ನಂಬಿಕೆ. ಇದರ ಪರಿಣಾಮವಾಗಿ ಅನೇಕ ಜನರು ಮೊಟ್ಟೆಯ ಬಿಳಿ ಭಾಗವನ್ನು ಮಾತ್ರ ಸೇವಿಸುತ್ತಾರೆ. ಪೌಷ್ಟಿಕಾಂಶ ಭರಿತ ಹಳದಿ ಭಾಗವನ್ನು ಸಂಪೂರ್ಣವಾಗಿ ಬದಿಗಿಡುತ್ತಾರೆ. ಹಳದಿ ಭಾಗದಲ್ಲಿ ಕೊಬ್ಬು ಹೆಚ್ಚಾಗಿರುತ್ತದೆ, ಹೃದಯಕ್ಕೆ ಹಾನಿ ಮಾಡುತ್ತದೆ ಹಾಗೂ ಇದು ತೂಕ ಹೆಚ್ಚಾಗಲು ಕಾರಣವಾಗುತ್ತದೆ ಎಂಬಂತಹ ಸಾಮಾನ್ಯ ಹೇಳಿಕೆಗಳಿಂದ ಪ್ರಭಾವಿತರಾಗಿ ನಾವು ನಮ್ಮದೇ ಆದ ತೀರ್ಮಾನಗಳಿಗೆ ಬರುತ್ತೇವೆ. ಆದರೆ, ನಮ್ಮಲ್ಲಿ ಎಷ್ಟು ಜನರಿಗೆ ಮೊಟ್ಟೆಯ ಹಳದಿ ಭಾಗವು ಮೊಟ್ಟೆಯ ಸಂಪೂರ್ಣ ಪೌಷ್ಟಿಕಾಂಶದ ಪ್ರಯೋಜನಗಳನ್ನು ಪಡೆಯಲು ಅತ್ಯಗತ್ಯ ಎಂದು ನಿಜವಾಗಿಯೂ ತಿಳಿದಿದೆ? ಮೊಟ್ಟೆಯ ನಿಜವಾದ ಪ್ರಯೋಜನಗಳು ಸಂಪೂರ್ಣ ಆಹಾರವೆಂದು ವ್ಯಾಪಕವಾಗಿ ಪರಿಗಣಿಸಲ್ಪಟ್ಟಿರುವ ವಾಸ್ತವವಾಗಿ ಹಳದಿ ಲೋಳೆಯಲ್ಲಿದೆ ಎಂದು ವಿವಿಧ ಅಧ್ಯಯನಗಳು ದೃಢಪಡಿಸುತ್ತವೆ.ಮೊಟ್ಟೆಯ ಹಳದಿ ಲೋಳೆಯಲ್ಲಿ ಕಂಡುಬರುವ ಪೋಷಕಾಂಶಗಳು ಯಾವುವು?: ಜಾಗತಿಕವಾಗಿ ಮೊಟ್ಟೆಯು ಲಭ್ಯವಿರುವ ಅತ್ಯಂತ ಕೈಗೆಟುಕುವ ಹಾಗೂ ಸುಲಭವಾಗಿ ಪ್ರವೇಶಿಸಬಹುದಾದ ಪೌಷ್ಟಿಕ ಆಹಾರಗಳಲ್ಲಿ ಒಂದಾಗಿದೆ. ಮೊಟ್ಟೆಯ ಬಿಳಿಭಾಗವು ಪ್ರೋಟೀನ್‌ನಲ್ಲಿ ಸಮೃದ್ಧವಾಗಿದೆ ಎಂದು ತಿಳಿದಿದೆ. ದೇಹಕ್ಕೆ ಅಗತ್ಯವಿರುವ ಅಗತ್ಯ ಜೀವಸತ್ವಗಳು ಮತ್ತು ಖನಿಜಗಳು ವಾಸ್ತವವಾಗಿ ಮೊಟ್ಟೆಯ ಹಳದಿ ಲೋಳೆಯಲ್ಲಿ ಕೇಂದ್ರೀಕೃತವಾಗಿರುತ್ತವೆ ಎಂದು ಆರೋಗ್ಯ ತಜ್ಞರು ತಿಳಿಸುತ್ತಾರೆ. ನೀವು ತಿನ್ನುವ ಮೊದಲು ಹಳದಿ ಲೋಳೆಯನ್ನು ತೆಗೆದಾಗ, ಮೊಟ್ಟೆಯ ಪೌಷ್ಟಿಕಾಂಶದ ಮೌಲ್ಯವು ಪರಿಣಾಮಕಾರಿಯಾಗಿ ಅರ್ಧದಷ್ಟು ಕಡಿಮೆಯಾಗುತ್ತದೆ. ವಾಸ್ತವವಾಗಿ ಮೊಟ್ಟೆಯನ್ನು ನಿಜವಾಗಿಯೂ 'ಸೂಪರ್‌ಫುಡ್' ಸ್ಥಾನಕ್ಕೆ ಏರಿಸುವುದು ಹಳದಿ ಲೋಳೆಯಾಗಿದೆ. ಹಳದಿ ಲೋಳೆಯಲ್ಲಿನ ಜೀವಸತ್ವಗಳು, ಖನಿಜಗಳೇನು?: ಮೊಟ್ಟೆಯ ಹಳದಿ ಲೋಳೆಯಲ್ಲಿ ಕೊಬ್ಬು ಕರಗುವ ಜೀವಸತ್ವಗಳು, ನಿರ್ದಿಷ್ಟವಾಗಿ ವಿಟಮಿನ್‌ಗಳು ಎ, ಡಿ, ಇ ಮತ್ತು ಕೆ ಇರುತ್ತವೆ. ಈ ಪೋಷಕಾಂಶಗಳು ನಮ್ಮ ದೇಹದ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವುದಲ್ಲದೇ, ಮೂಳೆಯ ಆರೋಗ್ಯ ಹಾಗೂ ಬಲಕ್ಕೆ ಗಮನಾರ್ಹವಾಗಿ ಕೊಡುಗೆ ನೀಡುತ್ತವೆ. ಅವು ದೇಹದಿಂದ ವಿಷವನ್ನು ತೆಗೆದುಹಾಕಲು ಸಹಾಯ ಮಾಡುವ ಉತ್ಕರ್ಷಣ ನಿರೋಧಕಗಳಾಗಿಯೂ ಕಾರ್ಯನಿರ್ವಹಿಸುತ್ತವೆ. ಇದಲ್ಲದೇ, ಇವು ವಿಟಮಿನ್ ಬಿ 12, ಫೋಲಿಕ್ ಆಮ್ಲ ಹಾಗೂ ಕಬ್ಬಿಣದಲ್ಲಿ ಹೇರಳವಾಗಿವೆ. ಕೆಂಪು ರಕ್ತ ಕಣಗಳ ಉತ್ಪಾದನೆ, ಮೆದುಳಿನ ಆರೋಗ್ಯ ಕಾಪಾಡಿಕೊಳ್ಳಲು ಅಗತ್ಯವಾದ ಪೋಷಕಾಂಶಗಳು ಹಳದಿ ಲೋಳೆಯಲ್ಲಿದೆ.

ಮೊಟ್ಟೆಯ ಬಿಳಿ ಭಾಗ ಮಾತ್ರ ಸೇವಿಸಿ, ಹಳದಿ ಭಾಗ ಬಿಡುತ್ತೀರಾ?ಹೃದಯ ಆರೋಗ್ಯ ಉತ್ತಮ: ದಿನನಿತ್ಯ ಮೊಟ್ಟೆ ಸೇವಿಸುವುದರಿಂದ ಹೃದಯ ಕಾಯಿಲೆ ಬರುತ್ತದೆ ಎಂಬ ಸಾಮಾನ್ಯ



ಭಯವಿದೆ. ಅಮೆರಿಕದ ನ್ಯಾಷನಲ್ ಲೈಬ್ರರಿ ಆಫ್ ಮೆಡಿಸಿನ್ ಪ್ರಕಟಿಸಿದ ಮಾಹಿತಿಯ ಪ್ರಕಾರ, ಪ್ರತಿದಿನ ಒಂದು ಅಥವಾ ಎರಡು ಮೊಟ್ಟೆಗಳನ್ನು ಸೇವಿಸುವುದರಿಂದ ಹೃದಯ ಕಾಯಿಲೆಯ ಅಪಾಯ ಹೆಚ್ಚಾಗುವುದಿಲ್ಲ. ಇದಕ್ಕೆ ವಿರುದ್ಧವಾಗಿ ಅವು ದೇಹಕ್ಕೆ ಅಗತ್ಯವಿರುವ ಅಗತ್ಯ ಪೋಷಕಾಂಶಗಳನ್ನು ಒದಗಿಸುತ್ತವೆ. ಈಗಾಗಲೇ ಹೃದಯ ಕಾಯಿಲೆಗಳಿಂದ ಬಳಲುತ್ತಿರುವ ವ್ಯಕ್ತಿಗಳು ತಮ್ಮ ದೈನಂದಿನ ಕೊಲೆಸ್ಟ್ರಾಲ್ ಸೇವನೆಯನ್ನು 200 ಮಿಲಿಗ್ರಾಂಗಿಂತ ಕಡಿಮೆಗೆ ಸೀಮಿತಗೊಳಿಸುವುದು ಸೂಕ್ತವಾಗಿದೆ. ಹಾರ್ವರ್ಡ್ ಹೆಲ್ತ್ ಪಬ್ಲಿಷಿಂಗ್ ನಡೆಸಿದ ಅಧ್ಯಯನಗಳು, ನಾವು ಸೇವಿಸುವ ಆಹಾರದ ಪರಿಣಾಮವಾಗಿ ಮಾತ್ರ ದೇಹದ ಕೊಲೆಸ್ಟ್ರಾಲ್ ಮಟ್ಟಗಳು ಹೆಚ್ಚಾಗುವುದಿಲ್ಲ ಎಂದು ಸೂಚಿಸುತ್ತವೆ.ಮೆದುಳು ಹಾಗೂ ನರಮಂಡಲಕ್ಕೆ ಒಳ್ಳೆಯದು: ಮೊಟ್ಟೆಯ ಹಳದಿ ಲೋಳೆಯಲ್ಲಿ 'ಕೋಲೀನ್' ಎಂಬ ನಿರ್ಣಾಯಕ ಪೋಷಕಾಂಶವಿದೆ. ಈ ಪೋಷಕಾಂಶವು ಮೆದುಳಿನ ಕಾರ್ಯ, ನರಮಂಡಲದ ಆರೋಗ್ಯ ಹಾಗೂ ಸ್ಮರಣಶಕ್ತಿ ವರ್ಧನೆಗೆ ಅತ್ಯಗತ್ಯ. ಗರ್ಭಿಣಿಯರಿಗೆ ಇದು ವಿಶೇಷವಾಗಿ ಅವಶ್ಯಕವಾಗಿದೆ. ಏಕೆಂದರೆ, ಬೆಳೆಯುತ್ತಿರುವ ಭ್ರೂಣದ ಮೆದುಳಿನ ಬೆಳವಣಿಗೆಯನ್ನು ಬೆಂಬಲಿಸುವಲ್ಲಿ ಕೋಲೀನ್ ಮಹತ್ವದ ಪಾತ್ರ ವಹಿಸುತ್ತದೆ. ಮೆದುಳು ಹಾಗೂ ನರಮಂಡಲ ಎರಡನ್ನೂ ರಕ್ಷಿಸುವಲ್ಲಿ ಮೊಟ್ಟೆಯ ಹಳದಿ ಲೋಳೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ವೈದ್ಯಕೀಯ ಅಧ್ಯಯನಗಳು ದೃಢಪಡಿಸುತ್ತವೆ. ಕಣ್ಣಿನ ಆರೋಗ್ಯ ಅತ್ಯುತ್ತಮ: ವಯಸ್ಸಾದಂತೆ, ದೃಷ್ಟಿ ಕಡಿಮೆಯಾಗುವುದು ಹಾಗೂ ಕಣ್ಣಿನ ಪೊರೆಗಳಂತಹ ದೃಷ್ಟಿ ಸಂಬಂಧಿತ ಸಮಸ್ಯೆಗಳನ್ನು ಅನುಭವಿಸುವುದು ಸಹಜ. ಮೊಟ್ಟೆಯ ಹಳದಿ ಭಾಗದಲ್ಲಿರುವ ಉತ್ಕರ್ಷಣ ನಿರೋಧಕಗಳು, ನಿರ್ದಿಷ್ಟವಾಗಿ ಲ್ಯೂಟೀನ್ ಹಾಗೂ ಜಿಯಾಕ್ಸಾಂಥಿನ್ ಕಣ್ಣುಗಳಿಗೆ ಹಾನಿ ಮಾಡುವ ಹಾನಿಕಾರಕ ನೀಲಿ ಬೆಳಕಿನ ವಿರುದ್ಧ ರಕ್ಷಣೆ ನೀಡುತ್ತವೆ. ಕಣ್ಣುಗಳಿಗೆ ರಕ್ಷಣಾತ್ಮಕ ಗುರಾಣಿಯಾಗಿ ಕಾರ್ಯನಿರ್ವಹಿಸುವ ಈ ಸಂಯುಕ್ತಗಳು ದೃಷ್ಟಿ ತೀಕ್ಷ್ಣತೆಯನ್ನು ಸುಧಾರಿಸಲು ಸಹಾಯ ಮಾಡುತ್ತವೆ.

ಪೋಷಕಾಂಶಗಳ ಹೀರಿಕೊಳ್ಳುವಿಕೆ ಬೆಸ್ಟ್: ನಾವು ಸೇವಿಸುವ ಆಹಾರದಲ್ಲಿರುವ ಜೀವಸತ್ವಗಳನ್ನು ದೇಹವು ಸರಿಯಾಗಿ ಹೀರಿಕೊಳ್ಳಲು, ಸ್ವಲ್ಪ ಪ್ರಮಾಣದ ಆಹಾರದ ಕೊಬ್ಬಿನ ಅಗತ್ಯವಿರುತ್ತದೆ. ಮೊಟ್ಟೆಯ ಹಳದಿ ಭಾಗದಲ್ಲಿರುವ ಆರೋಗ್ಯಕರ ಕೊಬ್ಬುಗಳು ದೇಹವು ಈ ಜೀವಸತ್ವಗಳನ್ನು ಹೀರಿಕೊಳ್ಳಲು ಅನುಕೂಲವಾಗುತ್ತದೆ. ಇದಲ್ಲದೇ, ಇಡೀ ಮೊಟ್ಟೆಯನ್ನು ಸೇವಿಸುವುದರಿಂದ ಅತ್ಯಾಧಿಕ ಭಾವನೆ ಉಂಟಾಗುತ್ತದೆ. ಇದರಿಂದಾಗಿ ಅನಗತ್ಯ ತಿಂಡಿಗಳ ಸೇವನೆಯನ್ನು ತಡೆಯುತ್ತದೆ. ಇದು ಪರೋಕ್ಷವಾಗಿ ತೂಕ ನಿರ್ವಹಣೆಗೆ ಸಹಾಯ ಮಾಡುತ್ತದೆ.ಸ್ನಾಯು ಬೆಳವಣಿಗೆ, ಶಕ್ತಿ ವೃದ್ಧಿ: ತಮ್ಮ ಸ್ನಾಯುಗಳನ್ನು ಬಲಪಡಿಸಲು ಬಯಸುವ ವ್ಯಕ್ತಿಗಳು ಅಂದ್ರೆ, ಕ್ರೀಡಾಪಟುಗಳು ಸಾಮಾನ್ಯವಾಗಿ ಮೊಟ್ಟೆಯ ಬಿಳಿಭಾಗವನ್ನು ಮಾತ್ರ ಸೇವಿಸುತ್ತಾರೆ. ಇಡೀ ಮೊಟ್ಟೆಯನ್ನು ಸೇವಿಸಿದಾಗ ದೇಹವು ಮೊಟ್ಟೆಯ ಬಿಳಿಭಾಗಕ್ಕಿಂತ ಹೆಚ್ಚಾಗಿ ಪ್ರೋಟೀನ್ ಅನ್ನು ಹೆಚ್ಚು ಪರಿಣಾಮಕಾರಿಯಾಗಿ ಹೀರಿಕೊಳ್ಳುತ್ತದೆ. ಸ್ನಾಯುಗಳ ಬೆಳವಣಿಗೆ, ಅಂಗಾಂಶ ದುರಸ್ತಿಗೆ ಬಂದಾಗ, ಇಡೀ ಮೊಟ್ಟೆಗೆ ಪ್ರತಿಸ್ಪರ್ಧಿಯಾಗಿ ಯಾವುದೂ ಇಲ್ಲ ಎಂದು ತಜ್ಞರು ತಿಳಿಸುತ್ತಾರೆ.

ವೈದ್ಯರು ನಿರ್ದಿಷ್ಟವಾಗಿ ಸಲಹೆ ನೀಡದ ಹೊರತು, ಆರೋಗ್ಯವಂತ ವ್ಯಕ್ತಿಗಳು ಹಳದಿ ಲೋಳೆ ಸೇರಿದಂತೆ ಇಡೀ ಮೊಟ್ಟೆಯನ್ನು ಸೇವಿಸುವುದು ಉತ್ತಮ. ಹಳದಿ ಲೋಳೆಯನ್ನು ತ್ಯಜಿಸುವ ಮೂಲಕ ನಮಗೆ ನೈಸರ್ಗಿಕವಾಗಿ ಲಭ್ಯವಿರುವ ಕೆಲವು ಅತ್ಯುತ್ತಮ ಎಂಬುದನ್ನು ಅರಿತುಕೊಳ್ಳಬೇಕು. ಮಿತವಾಗಿ ಮೊಟ್ಟೆಗಳನ್ನು ಸೇವಿಸುವುದರಿಂದ ಆರೋಗ್ಯಕರ ಜೀವನಶೈಲಿಗೆ ದಾರಿ ಮಾಡಿಕೊಡುತ್ತದೆ.

**ಓದುಗರಿಗೆ ಸೂಚನೆ:** ಈ ವರದಿಯಲ್ಲಿ ನಿಮಗೆ ನೀಡಲಾದ ಎಲ್ಲ ಆರೋಗ್ಯ ಸಂಬಂಧಿತ ಮಾಹಿತಿ ಹಾಗೂ ಸಲಹೆಗಳು ಸಾಮಾನ್ಯ ಮಾಹಿತಿಗಾಗಿ ಮಾತ್ರ. ನಾವು ಈ ಮಾಹಿತಿಯನ್ನು ವೈಜ್ಞಾನಿಕ ಸಂಶೋಧನೆ, ಅಧ್ಯಯನಗಳು, ವೈದ್ಯಕೀಯ ಮತ್ತು ಆರೋಗ್ಯ ವೃತ್ತಿಪರ ಸಲಹೆಯ ಆಧಾರದ ಮೇಲೆ ಒದಗಿಸುತ್ತಿದ್ದೇವೆ. ನೀವು ಈ ಬಗ್ಗೆ ವಿವರವಾಗಿ ತಿಳಿದುಕೊಳ್ಳಬೇಕು. ಮತ್ತು ಈ ವಿಧಾನ ಅಥವಾ ಕಾರ್ಯವಿಧಾನವನ್ನು ಅಳವಡಿಸಿಕೊಳ್ಳಬೇಕಾದರೆ ಪರಿಣತ ವೈದ್ಯರನ್ನು ಸಂಪರ್ಕಿಸುವುದು ಉತ್ತಮ.

## ಬೇಸಿಗೆಯಲ್ಲಿ ಫ್ಯಾಮಿಲಿ ಟೂರ್ ಮಾಡಲು ಯೋಚಿಸುತ್ತಿದ್ದೀರಾ?



ನಿಮ್ಮ ಕುಟುಂಬದ ಜೊತೆಗೆ ಮೋಜಿನ ರಜೆ ಕಳೆಯಲು ಪ್ಲಾನ್ ಮಾಡುತ್ತಿದ್ದೀರಾ? ನಿಮಗೆ ಇಷ್ಟವಾಗುವಂತಹ ಅದ್ಭುತ ಸುಂದರ ತಾಣಗಳ ಕುರಿತು ಇಲ್ಲಿ ತಿಳಿಯೋಣ.

ಮಕ್ಕಳಿಗೆ ಬೇಸಿಗೆ ರಜೆ ಪ್ರಾರಂಭವಾದಾಗ ಅನೇಕರು ಪ್ರವಾಸಗಳನ್ನು ಕೈಗೊಳ್ಳಲು ಪ್ಲಾನ್ ಮಾಡುತ್ತಾರೆ. ಕೆಲವರು ಸ್ನೇಹಿತರು ಮತ್ತು ಕುಟುಂಬದೊಂದಿಗೆ ದೂರದ ಪ್ರದೇಶಗಳಿಗೆ ಪ್ರಯಾಣಿಸಲು ಆಯ್ಕೆ ಮಾಡಿದರೆ, ಮತ್ತೆ ಕೆಲವು ಜನರು ಹತ್ತಿರದ ಸ್ಥಳಗಳಿಗೆ ಭೇಟಿ ನೀಡಲು ಬಯಸುತ್ತಾರೆ. ನಿರ್ದಿಷ್ಟವಾಗಿ ಹೇಳುವುದಾದರೆ, ಜನರು ಬೇಸಿಗೆಯ ತಿಂಗಳುಗಳಲ್ಲಿ ತಂಪಾದ, ಆಹ್ಲಾದಕರ ಹವಾಮಾನವಿರುವ ಸ್ಥಳಗಳನ್ನು ಹುಡುಕುತ್ತಾರೆ. 'ತಂಪಾದ ಸ್ಥಳಗಳು' ಎಂಬ ವಿಷಯ ಬಂದಾಗ ಊಟಿ ಹಾಗೂ ಮನಾಲಿಯಂತಹ ತಾಣಗಳು ಅನೇಕರಿಗೆ ಮೊದಲು ನೆನಪಿಗೆ ಬರುತ್ತವೆ. ಈ ಜನಪ್ರಿಯ ತಾಣಗಳನ್ನು ಮೀರಿ ಬೇಸಿಗೆಯಲ್ಲಿ ಭೇಟಿ ನೀಡಲು ಅಷ್ಟೇ ಉತ್ತಮ ಆಯ್ಕೆಗಳಾಗಿರುವ ಭಾರತದಲ್ಲಿ ಹಲವಾರು ಇತರ ತಾಣಗಳಿವೆ. ಈ ಸ್ಟೋರಿಯಲ್ಲಿ ತಂಪಾದ ಸುಂದರ ಸ್ಥಳಗಳು ಯಾವವು ಎಂಬುದನ್ನು ತಿಳಿಯೋಣ.

ಪಶ್ಚಿಮ ಬಂಗಾಳದ ಡಾರ್ಜಿಲಿಂಗ್: ಬೇಸಿಗೆಯಲ್ಲಿ ಭೇಟಿ ನೀಡಲು ಡಾರ್ಜಿಲಿಂಗ್ ಪ್ರಮುಖ ತಾಣಗಳಲ್ಲಿ ಸ್ಥಾನ ಪಡೆದಿದೆ. ಇಲ್ಲಿ ಕಂಡುಬರುವ ನೈಸರ್ಗಿಕ ಸೌಂದರ್ಯವು ನಿಜವಾಗಿಯೂ ಮೋಡಿ ಮಾಡುತ್ತದೆ. ಗಓಇಖಅಔ ವಿಶ್ವ ಪರಂಪರೆಯ ತಾಣ ಡಾರ್ಜಿಲಿಂಗ್ ಹಿಮಾಲಯನ್ ಪುಟ್ಟ ರೈಲಿನಲ್ಲಿ ಪ್ರಯಾಣಿಸುವುದು ಒಂದು ಮರೆಯಲಾಗದ ಅನುಭವವಾಗಿದೆ. ಟೈಗರ್ ಹಿಲ್ ಪ್ರದೇಶದಲ್ಲಿ ಸೂರ್ಯೋದಯವನ್ನು ವೀಕ್ಷಿಸುವುದು ಮನಕ್ಕೆ ಸಂತೋಷ ಲಭಿಸುತ್ತದೆ.

ಸೂರ್ಯನ ಕಿರಣಗಳು ಕಾಂಚನಜುಂಗಾ ಪರ್ವತದ ಮೇಲೆ ಬಿದ್ದಾಗ ಅದು ಬಂಗಾರದಂತೆ ಹೊಳೆಯುತ್ತದೆ. ಡಾರ್ಜಿಲಿಂಗ್ ಚಹಾ ತೋಟಗಳಿಗೆ ಹೆಸರುವಾಸಿಯಾಗಿವೆ. ಹ್ಯಾಪಿ ವ್ಯಾಲಿ ಟೀ ಎಸ್ಟೇಟ್‌ನಂತಹ ತೋಟಗಳಿಗೆ ಭೇಟಿ ನೀಡಬಹುದು. ಬತಾಸಿಯಾ ಲೂಪ್ ಇಲ್ಲಿ ರೈಲು ವೃತ್ತಾಕಾರದಲ್ಲಿ ಚಲಿಸುತ್ತದೆ, ಇಲ್ಲಿಂದ ಪರ್ವತಗಳ ಸುಂದರ ದೃಶ್ಯಗಳು ಕಾಣಿಸಿಗುತ್ತವೆ. ಪದ್ಮಜಾ ನಾಯ್ಡು ಪ್ರಾಣಿ ಸಂಗ್ರಹಾಲಯದಲ್ಲಿ ಕೆಂಪು ಪಾಂಡಾ ಹಾಗೂ ಹಿಮ ಚಿರತೆಗಳನ್ನು ಕಾಣಬಹುದು.

**ಕರ್ನಾಟಕದ ಕೊಡಗು:** ದಕ್ಷಿಣ ಭಾರತದ ಸ್ಕಾಟ್ಲೆಂಡ್ ಎಂದು ಪ್ರಸಿದ್ಧವಾಗಿರುವ ಕೊಡಗು (ಕೂರ್ಗ್) ಬೇಸಿಗೆಯ ವಿಹಾರಕ್ಕೆ ಸೂಕ್ತ ತಾಣವಾಗಿದೆ. ಮಡಿಕೇರಿಯ ರಾಜಾಸೀಟ್‌ನಲ್ಲಿ ಸುಂದರ ಸೂರ್ಯಾಸ್ತ ಮತ್ತು ಉದ್ಯಾನವನ, ಅಬ್ಬೆ ಫಾಲ್ಸ್, ಐತಿಹಾಸಿಕ ಮಡಿಕೇರಿ ಕೋಟೆ, ಪುರಾತನ ಓಂಕಾರೇಶ್ವರ ದೇವಸ್ಥಾನ, ಮಂಡಲಪಟ್ಟಿ ವ್ಯೂ ಪಾಯಿಂಟ್ ಮತ್ತು ಜೀಪ್ ಸಫಾರಿಗೆ ಸೂಕ್ತವಾದ ಎತ್ತರದ ಬೆಟ್ಟವಾಗಿದೆ. ಕುಶಾಲನಗರದ ವ್ಯಾಪ್ತಿಯಲ್ಲಿ ಬರುವ ದುಬಾರೆ ಆನೆ ಶಿಬಿರ, ರಾಫ್ಟಿಂಗ್, ಕಾವೇರಿ ನಿಸರ್ಗಧಾಮ, ಬಿದಿರಿನ ಕಾಡು ಮತ್ತು ದ್ವೀಪ ಗಮನಸೆಳೆಯುತ್ತದೆ. ಬೈಲಕುಪ್ಪೆ ಟಿಬೆಟಿಯನ್ ಬೌದ್ಧ ವಿಹಾರ, ತಲಕಾವೇರಿ ಕಾವೇರಿ ನದಿಯ ಉಗಮ ಸ್ಥಾನ ಹಾಗೂ ಬ್ರಹ್ಮಗಿರಿ ಬೆಟ್ಟಗಳ ನಡುವೆ ಇರುವ ಇರ್ಪು ಜಲಪಾತ, ಕೊಡಗಿನ ಅತ್ಯಂತ ಎತ್ತರದ ಬೆಟ್ಟ ತಡಿಯಂಡಮೋಳ್ ಬೆಟ್ಟ, ನಾಗರಹೊಳೆ ರಾಷ್ಟ್ರೀಯ ಉದ್ಯಾನವನ, ವನ್ಯಜೀವಿ ಸಫಾರಿ ಹಾಗೂ ಸುಂದರ ಕಾಫಿ ತೋಟಗಳಿಗೆ ಭೇಟಿ ನೀಡಬಹುದು. ಈ ಆಕರ್ಷಣೀಯ ತಾಣಗಳು ಖಂಡಿತವಾಗಿಯೂ ನೋಡಲೇಬೇಕಾದ ಸ್ಥಳಗಳಾಗಿವೆ.

**ತಮಿಳುನಾಡಿನ ಊಟಿ:** ಹಚ್ಚ ಹಸಿರಿನ, ಸುಂದರವಾದ ಸರೋವರಗಳು ಹಾಗೂ ಎತ್ತರದ ಬೆಟ್ಟಗಳು ಊಟಿಯ ವಿಶಿಷ್ಟ ಲಕ್ಷಣಗಳಾಗಿವೆ. ಇದು ನೀಲಗಿರಿ ಪರ್ವತಗಳ ಮಧ್ಯೆ ಇದೆ. ಬೇಸಿಗೆಯಲ್ಲಿ ಸರೋವರಗಳು ಹಾಗೂ ಟೀ ತೋಟಗಳು ಮನಕ್ಕೆ ಖುಷಿ ನೀಡುತ್ತವೆ. ರೈಲು ಪ್ರಯಾಣವು ಈ ಪ್ರದೇಶದ ವಿಶಿಷ್ಟ ಹೈಲೈಟ್ ಆಗಿದೆ. ನೀಲಗಿರಿ ಜಿಲ್ಲೆಯಲ್ಲಿರುವ ಊಟಿಯನ್ನು 'ಬೆಟ್ಟಗಳ ರಾಣಿ' ಎಂದು ಪರಿಗಣಿಸಲಾಗುತ್ತದೆ. ಆದರೆ, ದಿಂಡಿಗಲ್ ಜಿಲ್ಲೆಯಲ್ಲಿರುವ ಕೊಡೈಕೆನಾಲ್ ಅನ್ನು 'ಬೆಟ್ಟಗಳ ರಾಜಕುಮಾರಿ' ಎಂದು ಕರೆಯಲಾಗುತ್ತದೆ.

**ಕೇರಳದ ಮುನ್ನಾರ್:** ಸುಂದರವಾದ ಕಡಲತೀರಗಳು ಹಾಗೂ ಪ್ರಶಾಂತವಾದ ಹಿನ್ನೀರಿನೊಂದಿಗೆ ಕೇರಳದ ಮುನ್ನಾರ್ ಅತ್ಯಂತ ಆನಂದದಾಯಕ ತಾಣಗಳಲ್ಲಿ ಒಂದಾಗಿದೆ. ಬೇಸಿಗೆಯ ತಿಂಗಳುಗಳಲ್ಲಿ ರಜೆಯ ಮೇಲೆ ಹೋಗಲು ಬಯಸುವ ಕುಟುಂಬಗಳಿಗೆ ಇದು ಅತ್ಯುತ್ತಮ ಪ್ರವಾಸಿ ತಾಣವಾಗಿದೆ.

ಇದರ ಹಚ್ಚ ಹಸಿರಿನ ತೋಟಗಳು ಹಾಗೂ ಧುಮ್ಮಿಕ್ಕುವ ಜಲಪಾತಗಳು ನಿಜವಾಗಿಯೂ ಸ್ವರ್ಗೀಯ ವಾತಾವರಣ ಸೃಷ್ಟಿಸುತ್ತವೆ.

**ಮೇಘಾಲಯದ ಶಿಲ್ಲಾಂಗ್:** ಶಿಲ್ಲಾಂಗ್ ನೈಸರ್ಗಿಕ ಸೌಂದರ್ಯ ಹಾಗೂ ರೋಮಾಂಚನಕಾರಿ ಸಂಸ್ಕೃತಿಯನ್ನು ಕಣ್ತುಂಬಿಕೊಳ್ಳಲು ಹೇಳಿ ಮಾಡಿಸಿದ ತಾಣವಾಗಿದೆ. ಮೇ ತಿಂಗಳಲ್ಲಿ ಇಲ್ಲಿನ ಹವಾಮಾನವು ಟ್ರೆಕ್ಕಿಂಗ್ ಮತ್ತು ಪಿಕ್ನಿಕ್‌ಗೆ ಸೂಕ್ತವಾಗಿದೆ. ಬೇಸಿಗೆಯಲ್ಲಿ ಭೇಟಿ ನೀಡಲು ಸೂಕ್ತ ಸ್ಥಳಗಳಾದ ಎಲಿಫೆಂಟ್ ಫಾಲ್ಸ್, ಉಮಿಯಮ್ ಸರೋವರ ಮತ್ತು ಶಿಲ್ಲಾಂಗ್ ಶಿಖರ ಸೇರಿವೆ.

ಭವ್ಯವಾದ ಅನುಭವವನ್ನು ನೀಡುತ್ತದೆ.

## ರಕ್ತ ಪರಿಚಲನೆ, ಜೀರ್ಣಕ್ರಿಯೆ ಸುಧಾರಣೆ, ಬೆನ್ನು ನೋವು ಕಡಿಮೆ ಮಾಡಲು ಈ ಯೋಗಾಸನಗಳು ಬೆಸ್ಟ್

ರಕ್ತ ಪರಿಚಲನೆ ಹಾಗೂ ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ಬೆನ್ನು ನೋವು ಹಾಗೂ ಒತ್ತಡ ತಗ್ಗಿಸಲು ಕೆಲವು ಯೋಗಾಸನಗಳನ್ನು ಅಭ್ಯಾಸ ಮಾಡಬೇಕಾಗುತ್ತದೆ ಎಂದು ತಜ್ಞರು ತಿಳಿಸುತ್ತಾರೆ. ಇಂದಿನ ಕಾರ್ಯನಿರತ ಜಗತ್ತಿನಲ್ಲಿ ದೈಹಿಕ ಚಟುವಟಿಕೆಯಲ್ಲಿನ ಕೊರತೆಯು ಆರೋಗ್ಯಕ್ಕೆ ಅಪಾಯ ಉಂಟುಮಾಡುತ್ತದೆ. ಸರಳ ಯೋಗಾಸನಗಳನ್ನು ಅಭ್ಯಾಸ ಮಾಡಲು ಪ್ರತಿದಿನ ಕೇವಲ 10ರಿಂದ 15 ನಿಮಿಷಗಳನ್ನು ಮೀಸಲಿಡುವ ಮೂಲಕ ನಿಮ್ಮ ದೇಹವನ್ನು ಆರೋಗ್ಯಕರವಾಗಿ ಹಾಗೂ ಸಕ್ರಿಯವಾಗಿಡಲು ಸಾಧ್ಯವಾಗುತ್ತದೆ. ದೇಹದ ಅಂಗಗಳು ಸರಿಯಾಗಿ ಕಾರ್ಯನಿರ್ವಹಿಸಲು ಸರಿಯಾದ ರಕ್ತ ಪರಿಚಲನೆ ಅತ್ಯಗತ್ಯವಾಗಿದೆ. ಇಂದಿನ ಕಾರ್ಯನಿರತ ಒತ್ತಡ ಜೀವನಶೈಲಿಯಲ್ಲಿ ಅನೇಕರು ತಮ್ಮ ದೈಹಿಕ ಚಟುವಟಿಕೆ ಕಡಿಮೆ ಮಾಡಿರುವುದರಿಂದ ರಕ್ತ ಪರಿಚಲನೆ ನಿಧಾನವಾಗುತ್ತದೆ. ಇದರ ಪರಿಣಾಮ ಹೃದಯದ ಸಮಸ್ಯೆಗಳು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದು. ಪ್ರತಿದಿನ ಕೆಲವು ಯೋಗ ಭಂಗಿಗಳನ್ನು ಅಭ್ಯಾಸ ಮಾಡುವುದರಿಂದ ರಕ್ತ ಪರಿಚಲನೆಯನ್ನು ಪರಿಣಾಮಕಾರಿಯಾಗಿ ಸುಧಾರಿಸಲು ಸಾಧ್ಯವಾಗುತ್ತದೆ. ಒಟ್ಟಾರೆ ದೇಹದ ಆರೋಗ್ಯಕ್ಕೆ ಅತ್ಯುತ್ತಮವಾದ ಕೆಲವು ಯೋಗಾಸನಗಳು ಕುರಿತು ತಿಳಿಯೋಣ.

**ಸರ್ವಾಂಗಾಸನ:** ಸರ್ವಾಂಗಾಸನ ಇಡೀ ದೇಹಕ್ಕೆ ಪ್ರಯೋಜನಕಾರಿಯಾದ ಪ್ರಬಲವಾದ ತಲೆಕೆಳಗಾದ ಯೋಗ ಭಂಗಿಯಾಗಿದೆ. ಇದರಿಂದ ಥೈರಾಯ್ಡ್ ಗ್ರಂಥಿಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ. ರಕ್ತ ಪರಿಚಲನೆ, ಜೀರ್ಣಕ್ರಿಯೆ ಸುಧಾರಿಸುತ್ತದೆ. ಒತ್ತಡವನ್ನು ಕಡಿಮೆ ಮಾಡುತ್ತದೆ. ತಲೆ ಹಾಗೂ ಮೆದುಳಿಗೆ ಹೆಚ್ಚಿನ ರಕ್ತದ ಹರಿವನ್ನು ಉತ್ತೇಜಿಸುತ್ತದೆ. ಹೃದಯದ ಆರೋಗ್ಯ ಸುಧಾರಿಸುತ್ತದೆ. ಆತಂಕ, ನಿದ್ರಾಹೀನತೆ ಕಡಿಮೆ ಮಾಡುತ್ತದೆ. ಭುಜಗಳು, ಕುತ್ತಿಗೆ, ಕೈಗಳು ಮತ್ತು ಬೆನ್ನುಮೂಳೆಯನ್ನು ಬಲಪಡಿಸುತ್ತದೆ. ಮಲಬದ್ಧತೆ ಹಾಗೂ ಅಜೀರ್ಣವನ್ನು ನಿವಾರಿಸಲು ಸಹಾಯ ಮಾಡುತ್ತದೆ. ಮುಖಕ್ಕೆ ರಕ್ತದ ಹರಿವನ್ನು ಹೆಚ್ಚಿಸಿ ಕಲೆಗಳನ್ನು ಕಡಿಮೆ ಮಾಡುತ್ತದೆ. ಕಣ್ಣಿನ ದೃಷ್ಟಿ ಸುಧಾರಿಸುತ್ತದೆ ಹಾಗೂ ಕೂದಲು ಉದುರುವಿಕೆ ತಡೆಯುತ್ತದೆ.

ಯೋಗದಿಂದ ಆರೋಗ್ಯ ವೃದ್ಧಿ

**ಉಷ್ಟ್ರಾಸನ:** ಉಷ್ಟ್ರಾಸನ ಭಂಗಿ ಅಭ್ಯಾಸ ಮಾಡುವುದರಿಂದ ರಕ್ತ ಪರಿಚಲನೆ ಹೆಚ್ಚಿಸುತ್ತದೆ, ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ಜೊತೆಗೆ ಬೆನ್ನು ನೋವು, ಒತ್ತಡ ಹಾಗೂ ಆತಂಕವನ್ನು ನಿವಾರಿಸಲು ಸಹಾಯ ಮಾಡುತ್ತದೆ. ಇದನ್ನು ಆಸನ ಮಾಡಲು ಮಂಡಿಯೂರಿ, ಹಿಂದಕ್ಕೆ ಬಾಗಿ ಮತ್ತು ನಿಮ್ಮ ಕೈಗಳಿಂದ ನಿಮ್ಮ ಪಾದಗಳನ್ನು ಹಿಡಿದುಕೊಳ್ಳಿ. ನಿಮ್ಮ ಎದೆಯನ್ನು ಮೇಲಕ್ಕೆ ಎತ್ತಿ 10 ರಿಂದ 20 ಸೆಕೆಂಡುಗಳ ಕಾಲ ಈ ಸ್ಥಾನದಲ್ಲಿರಿ. ನಂತರ ನಿಧಾನವಾಗಿ ಕುಳಿತಿರುವ ಸ್ಥಾನಕ್ಕೆ ಹಿಂತಿರುಗಬೇಕಾಗುತ್ತದೆ. ಈ ಆಸನ ಅಭ್ಯಾಸ ಮಾಡುವುದರಿಂದ ಬೆನ್ನುಮೂಳೆ ಬಲಪಡಿಸಿ, ಅದರ ನಮ್ಯತೆ ಹೆಚ್ಚಿಸುತ್ತದೆ. ಕಿಬ್ಬೊಟ್ಟೆಯ ಆಂತರಿಕ ಅಂಗಗಳನ್ನು ಮಸಾಜ್ ಮಾಡುವ ಮೂಲಕ ಜೀರ್ಣಕ್ರಿಯೆ ಸುಧಾರಿಸುತ್ತದೆ. ಎದೆಗೂಡನ್ನು ತೆರೆಯುವ ಮೂಲಕ ಶ್ವಾಸಕೋಶದ ಕಾರ್ಯಕ್ಷಮತೆಯನ್ನು ಹೆಚ್ಚಿಸಿ, ಅಸ್ತಮಾ ರೋಗಿಗಳಿಗೆ ಅನುಕೂಲ ಮಾಡಿಕೊಡುತ್ತದೆ. ಕೆಳ ಬೆನ್ನಿನ ಸ್ನಾಯುಗಳನ್ನು ಬಲಪಡಿಸಿ, ದೀರ್ಘಕಾಲದ ಸೊಂಟ ನೋವನ್ನು ಕಡಿಮೆ ಮಾಡುತ್ತದೆ. ದೇಹದಲ್ಲಿ ರಕ್ತ ಪರಿಚಲನೆಯನ್ನು ಸುಧಾರಿಸಿ, ಮನಸ್ಸಿನ ಒತ್ತಡ, ಆಯಾಸ ಕಡಿಮೆ ಮಾಡುತ್ತದೆ. ಕುಳಿತುಕೊಳ್ಳುವಾಗ ಬಾಗುವ ಅಭ್ಯಾಸವನ್ನು ಸರಿಪಡಿಸಿ, ನೇರ ಭಂಗಿಯನ್ನು ಉತ್ತೇಜಿಸುತ್ತದೆ.

**ಅಧೋ ಮುಖ ಶ್ವಾನಾಸನ:** ನೆಲದ ಮೇಲೆ ಮಂಡಿಯೂರಿ ಪ್ರಾರಂಭಿಸಿ, ನಿಮ್ಮ ಕೈಗಳನ್ನು ನೆಲದ ಮೇಲೆ ಇರಿಸಿ ಮತ್ತು ನಿಮ್ಮ ಸೊಂಟವನ್ನು ಮೇಲಕ್ಕೆತ್ತಿ. ನಿಮ್ಮ ದೇಹವು 'ಗಿ' ಆಕಾರವನ್ನು ರೂಪಿಸಬೇಕು. ಈ ಆಸನದಿಂದ ತಲೆಗೆ ರಕ್ತ ಪರಿಚಲನೆಯನ್ನು ಹೆಚ್ಚಿಸುತ್ತದೆ. ಇದು ಆಯಾಸವನ್ನು ನಿವಾರಿಸುತ್ತದೆ ಮತ್ತು ಬೆನ್ನುಮೂಳೆಯನ್ನು ಬಲಪಡಿಸುತ್ತದೆ.

ಹಿಂಭಾಗದ ಕಾಲುಗಳ ನಮ್ಯತೆಯನ್ನು ಸುಧಾರಿಸುತ್ತದೆ. ತಲೆಯು ಹೃದಯದ ಕೆಳಗೆ ಇರುವುದರಿಂದ, ಇದು ಮೆದುಳಿಗೆ ರಕ್ತದ ಹರಿವನ್ನು ಹೆಚ್ಚಿಸುತ್ತದೆ, ಹೃದಯ ಬಡಿತ ಸ್ಥಿರಗೊಳಿಸಲು ಸಹಾಯ ಮಾಡುತ್ತದೆ. ಮನಸ್ಸನ್ನು ಶಾಂತಗೊಳಿಸುತ್ತದೆ, ಒತ್ತಡ, ಆತಂಕವನ್ನು ಕಡಿಮೆ ಮಾಡುತ್ತದೆ. ಬೆನ್ನು ನೋವು, ಕುತ್ತಿಗೆ ನೋವು, ಮೈಗ್ರೇನ್‌ನಂತಹ ತಲೆನೋವನ್ನು ಕಡಿಮೆ ಮಾಡಲು ಸಹಾಯವಾಗುತ್ತದೆ. ಹೊಟ್ಟೆಯ ಸ್ನಾಯುಗಳನ್ನು ಉತ್ತೇಜಿಸುವ ಮೂಲಕ ಜೀರ್ಣಕ್ರಿಯೆ ಸುಧಾರಿಸುತ್ತದೆ ಹಾಗೂ ದೇಹಕ್ಕೆ **ಶಕ್ತಿಯನ್ನು ನೀಡುತ್ತದೆ**.

**ತ್ರಿಕೋನಾಸನ:** ಈ ಆಸನವು ದೇಹಕ್ಕೆ ಸಮತೋಲನವನ್ನು ಒದಗಿಸುತ್ತದೆ. ಇದು ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ ಮತ್ತು ದೇಹದ ಭಂಗಿಯನ್ನು ಸರಿಪಡಿಸುತ್ತದೆ. ನಿಮ್ಮ ಪಾದಗಳನ್ನು ಅಗಲವಾಗಿ ಇರಿಸಿ. ಒಂದು ಬದಿಗೆ ಬಾಗಿ ಹಾಗೂ ಒಂದು ಕೈಯನ್ನು ನಿಮ್ಮ ಪಾದದ ಬಳಿ ಇರಿಸಿ. ಇನ್ನೊಂದು ಕೈಯನ್ನು ಮೇಲಕ್ಕೆತ್ತಿ. ತ್ರಿಕೋನಾಸನ ಮಾಡುವುದರಿಂದ ಮಂಡಿರಜ್ಜುಗಳು, ತೊಡೆಸಂದು, ಕರುಗಳನ್ನು ವಿಸ್ತರಿಸುತ್ತದೆ, ಬೆನ್ನುಮೂಳೆಯ ನಮ್ಯತೆಯನ್ನು ಹೆಚ್ಚಿಸುತ್ತದೆ. ಬೆನ್ನುಮೂಳೆಯನ್ನು ವಿಸ್ತರಿಸುವ ಮೂಲಕ ಇದು ಬಿಗಿತವನ್ನು ಕಡಿಮೆ ಮಾಡಿ, ಬೆನ್ನು ನೋವಿನಿಂದ ಪರಿಹಾರ ನೀಡುತ್ತದೆ. ಕಿಬ್ಬೊಟ್ಟೆಯ ಅಂಗಗಳನ್ನು ಉತ್ತೇಜಿಸುವ ಮೂಲಕ ಇದು ಜೀರ್ಣಕ್ರಿಯೆ ಸುಧಾರಿಸಲು ಸಹಾಯ ಮಾಡುತ್ತದೆ. ಮನಸ್ಸನ್ನು ಶಾಂತಗೊಳಿಸುತ್ತದೆ, ಒತ್ತಡ ಕಡಿಮೆ ಮಾಡುತ್ತದೆ ಮತ್ತು ದೇಹಕ್ಕೆ ಶಕ್ತಿ ನೀಡುತ್ತದೆ.

**ವಿಪರೀತ ಕರಣಿ:** ವಿಪರೀತ ಕರಣಿ ಆಸನ ಮಾಡುವುದು ತುಂಬಾ ಸರಳ. ನಿಮ್ಮ ಕಾಲುಗಳನ್ನು ಮೇಲಕ್ಕೆ ಎತ್ತಿ ಮಲಗಿ, ಅವುಗಳನ್ನು ಗೋಡೆಯ ವಿರುದ್ಧ ವಿಶ್ರಾಂತಿ ಮಾಡಿ. ರಕ್ತ ಪರಿಚಲನೆ ಸುಧಾರಿಸುತ್ತದೆ. ನಿದ್ರಾಹೀನತೆಯನ್ನು ನಿವಾರಿಸುತ್ತದೆ. ನರಮಂಡಲವನ್ನು ಶಾಂತಗೊಳಿಸುತ್ತದೆ, ಪ್ಯಾರಾಸಿಂಪಥೆಟಿಕ್ ಮಾಡಲು ಸಹಾಯ ಮಾಡುತ್ತದೆ. ಬೆನ್ನುಮೂಳೆಯನ್ನು ಉದ್ದಗೊಳಿಸಲು, ಹ್ಯಾಮ್‌ಸ್ಟ್ರಿಂಗ್‌ಗಳು, ಕತ್ತಿನ ಹಿಂಭಾಗವನ್ನು ಹಿಗ್ಗಿಸಲು ಸಹಾಯ ಮಾಡುತ್ತದೆ. ಇದರಿಂದ ಬೆನ್ನುನೋವು ಕಡಿಮೆಯಾಗುತ್ತದೆ. ಹೊಟ್ಟೆಯ ಭಾಗದ ಮೇಲೆ ಸೌಮ್ಯವಾದ ಒತ್ತಡ ಉಂಟುಮಾಡಿ, ಜೀರ್ಣಕ್ರಿಯೆ ಸುಧಾರಿಸುತ್ತದೆ. ದೇಹದಿಂದ ವಿಷವನ್ನು ಹೊರಹಾಕಲು ಸಹಾಯ ಮಾಡುತ್ತದೆ. ದೀರ್ಘಕಾಲ ನಿಲ್ಲುವುದು ಅಥವಾ ಕುಳಿತುಕೊಳ್ಳುವುದರಿಂದ ಉಂಟಾಗುವ ಕಾಲುಗಳ ಆಯಾಸ ನಿವಾರಿಸುತ್ತದೆ.

**ಆಸನಗಳನ್ನು ಮಾಡುವವರಿಗೆ ಮುನ್ನೆಚ್ಚರಿಕೆಗಳೇನು?:** ಅಧಿಕ ರಕ್ತದೊತ್ತಡ ಅಥವಾ ಹೃದಯ ಕಾಯಿಲೆಗಳಿಂದ ಬಳಲುತ್ತಿರುವ ವ್ಯಕ್ತಿಗಳು ಮುಂಚಿತವಾಗಿ ವೈದ್ಯರನ್ನು ಸಂಪರ್ಕಿಸಬೇಕು. ಗರ್ಭಿಣಿಯರು ಈ ಆಸನಗಳನ್ನು ಅಭ್ಯಾಸ ಮಾಡುವುದನ್ನು ತಡೆಯಬೇಕು. ಕುತ್ತಿಗೆ ಅಥವಾ ಕಣ್ಣಿಗೆ ಸಂಬಂಧಿಸಿದ ಸಮಸ್ಯೆಗಳಿರುವವರು ತಜ್ಞರಿಂದ ಸಲಹೆ ಪಡೆಯಬೇಕು. ಈ ಯೋಗ ಆಸನಗಳನ್ನು ನಿಯಮಿತವಾಗಿ ಅಭ್ಯಾಸ ಮಾಡುವುದರಿಂದ ರಕ್ತ ಪರಿಚಲನೆ ಸುಧಾರಿಸುತ್ತದೆ.

## ಕೆಲವು ಆಹಾರಗಳು ಕೂದಲು ಉದುರುವಿಕೆಗೆ ಕಾರಣವಾಗುತ್ತವೆ? ಯಾವೆಲ್ಲಾ ಆಹಾರಗಳನ್ನು ಸೇವಿಸಬೇಕು?

ನಿಮ್ಮ ಆಹಾರದಲ್ಲಿ ಅತಿಯಾದ ಉಪ್ಪು ಸೇವಿಸುವುದರಿಂದ ಕೂದಲಿಗೆ ತುಂಬಾ ಹಾನಿಕಾರಕವಾಗುತದೆ. ಉಪ್ಪು ದೇಹದಲ್ಲಿ ನೀರಿನ ಮಟ್ಟವನ್ನು ಕಡಿಮೆ ಮಾಡುತದೆ. ಜೊತೆಗೆ ಕೂದಲಿನ ಕಿರುಚೀಲಗಳಿಗೆ ರಕ್ತ ಪರಿಚಲನೆಗೆ ಅಡ್ಡಿಯಾಗುತ್ತದೆ ಎಂಬುದು ತಜ್ಞರ ಅಭಿಪ್ರಾಯ. ಕೆಲವು ವ್ಯಕ್ತಿಗಳಿಗೆ ಅವರು ಜೀವನಕ್ರಮದಲ್ಲಿ ವಿವಿಧ ಬದಲಾವಣೆಗಳನ್ನು ಮಾಡಿಕೊಳ್ಳುತಾರೆ. ಜೆತೆಗೆ ದುಬಾರಿ ಕೂದಲಿನ ಎಣ್ಣೆಗಳು, ಉನ್ನತ ದರ್ಜೆಯ ಶಾಂಪೂಗಳು ಅಥವಾ ಸೀರಮ್‌ಗಳನ್ನು ಬಳಕೆ ಮಾಡುತಾರೆ. ಆದರೂ ಕೂಡ ಕೂದಲು ಉದುರುವಿಕೆ ನಿಲ್ಲವುದಿಲ್ಲ. ಕೂದಲು ಉದುರುವಿಕೆಯನ್ನು ಎದುರಿಸಿದಾಗಲೆಲ್ಲ, ನಮ್ಮ ತಕ್ಷಣದ ಪ್ರವೃತ್ತಿ ಬಾಹ್ಯ ಕೂದಲು ಆರೈಕೆ ಚಿಕಿತ್ಸೆಗಳತ್ತ ತಿರುಗುವುದು. ನಮ್ಮ ಕೂದಲಿನ ಆರೋಗ್ಯದ ಶೇ.70ರಷ್ಟು ನಾವು ಸೇವಿಸುವ ಆಹಾರವನ್ನು ಅವಲಂಬಿಸಿರುತದೆ. ನಾವು ತಿನ್ನಲು ಇಷ್ಟಪಡುವ ಕೆಲವು ಆಹಾರಗಳು, ನಮಗೆ ತಿಳಿಯದೇ ಕ್ರಮೇಣ ನಮ್ಮ ಕೂದಲು ಕಿರುಚೀಲಗಳನ್ನು ದುರ್ಬಲಗೊಳಿಸುತವೆ. ಕೂದಲು ಕೇವಲ ಸೌಂದರ್ಯದ ವಿಷಯವಲ್ಲ, ಇದು ನಿಮ್ಮ ದೇಹದ ಆಂತರಿಕ ಆರೋಗ್ಯದ ಪ್ರತಿಬಿಂಬವಾಗಿದೆ ಎಂದು ಸೌಂದರ್ಯ ತಜ್ಞರು ತಿಳಿಸುತಾರೆ. ನಿಮ್ಮ ಕೂದಲು ಆರೈಕೆ ಉತ್ಪನ್ನಗಳನ್ನು ಬದಲಾಯಿಸಲು ಪ್ರಾರಂಭಿಸುವ ಮೊದಲು ಯಾವ ಆಹಾರಗಳನ್ನು ತಪ್ಪಿಸಬೇಕು ಎಂಬುದನ್ನು ಅರ್ಥಮಾಡಿಕೊಳ್ಳುವುದು ಅತ್ಯಗತ್ಯವಾಗಿದೆ.

ಕೂದಲು ಉದುರುವಿಕೆ ತಡೆಯುವುದು ಸಂಸ್ಕರಿಸಿದ ಕಾರ್ಬೋಹೈಡ್ರೇಟ್, **ಸಕ್ಕರೆಯುಕ್ತ ಆಹಾರಗಳು:** ನಾವು ನಿತ್ಯ ಆನಂದಿಸುವ ಬಿಳಿ ಬ್ರೆಡ್, ಬಿಸ್ಕತುಗಳು, ಕೇಕ್‌ಗಳು ಹಾಗೂ ಸಿಹಿ ತಿಂಡಿಗಳು ನಿಮ್ಮ ಕೂದಲಿನ ದೊಡ್ಡ ಶತ್ರುಗಳಲ್ಲಿ ಸೇರಿವೆ. ಈ ವಸ್ತುಗಳಲ್ಲಿ ಕಂಡುಬರುವ ಸಂಸ್ಕರಿಸಿದ ಕಾರ್ಬೋಹೈಡ್ರೇಟ್ ರಕ್ತದಲ್ಲಿನ ಸಕ್ಕರೆ ಮಟ್ಟದಲ್ಲಿ ಹಠಾತ್ ಏರಿಕೆಗೆ ಕಾರಣವಾಗುತವೆ. ಓಖಉಊ ನಡೆಸಿದ 2016ರ ಅಧ್ಯಯನದ ಪ್ರಕಾರ, ಅಂತಹ ಕಾರ್ಬೋಹೈಡ್ರೇಟ್‌ಗಳ ಅತಿಯಾದ ಸೇವನೆಯು ದೇಹದೊಳಗೆ ಉರಿಯೂತ ಉಂಟುಮಾಡುತದೆ. ಉರಿಯೂತವು ಹಾರ್ಮೋನುಗಳ ಅಸಮತೋಲನಕ್ಕೆ ಕಾರಣವಾಗುತದೆ. ಮಹಿಳೆಯರಲ್ಲಿ ಇದರಿಂದಾಗಿ ಕೂದಲು ಉದುರುವಿಕೆ ಗಮನಾರ್ಹವಾಗಿ ಹದಗೆಡುತದೆ. ಸಕ್ಕರೆ ಆಹಾರಗಳು, ಸಂಸ್ಕರಿಸಿದ ಹಿಟ್ಟಿನಿಂದ ತಯಾರಿಸಿದ ವಸ್ತುಗಳನ್ನು ತಪ್ಪಿಸುವುದು ಹಾಗೂ ಧಾನ್ಯಗಳಿಗೆ ಬದಲಾಯಿಸುವುದು ನಿಮ್ಮ ಕೂದಲನ್ನು ಪುನರುಜ್ಜೀವನಗೊಳಿಸಲು ಸಹಾಯ ಮಾಡುತ್ತದೆ.

## ಸಂಕ್ಷಿಪ್ತ ಸುದ್ದಿಗಳು

# ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳೂ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದು ಅಗತ್ಯ ಎಂದು ಚಂದ್ರಪ್ಪ ಬಾರಂಗಿ ಹೇಳಿದರು.

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಸಕ್ತ ಸಾಲಿನ ಪಠ್ಯೇತರ ಚಟುವಟಿಕೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಒಂದಲ್ಲೊಂದು ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಸೂಕ್ತ ಮಾರ್ಗದರ್ಶನ ಹಾಗೂ ಪ್ರೋತ್ಸಾಹ ನೀಡಿದಾಗ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯೊಂದಿಗೆ ಉತ್ತಮ ವ್ಯಕ್ತಿತ್ವ ರೂಪುಗೊಳ್ಳುತ್ತದೆ. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ ನಿರಂತರ ಪರಿಶ್ರಮ ಪಟ್ಟರೆ ಯಶಸ್ಸು ಸಾಧಿಸಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಿದ್ದರು. ಡಾ. ಎಸ್.ಸಿ. ಚವಡಿ, ವಿ.ಎಂ. ಅಂಗಡಿ, ವಿ.ಎಂ. ಕೊಪ್ಪಳ ಸೇರಿದಂತೆ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೌದಿ ನಾಟಕದ ಮೂಲಕ ಅಲಕ್ಷಿತ ಸಮುದಾಯದ ಬದುಕಿನ ಅನಾವರಣ



**ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಅಲಕ್ಷಿತ ಸಮುದಾಯದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬ ಉದ್ದೇಶದಿಂದ ಕಳೆದ ಆರು ವರ್ಷಗಳಿಂದ ಉಚಿತ ಶಿಕ್ಷಣ ನೀಡುತ್ತಿರುವುದು ನಮ್ಮ ಸಂಸ್ಥೆಯ ಹೆಮ್ಮೆಯ ಕಾರ್ಯವಾಗಿದೆ ಎಂದು ಗದಗ ತೋಂಟದಾರ್ಯ ವಿದ್ಯಾಪೀಠದ ಅಣ್ಣಿಗೇರಿಯ ನಿಂಗಮ್ಮ ಹೂಗಾರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಪ್ರೊ. ಎಸ್.ಎಸ್. ಹರ್ಲಾಪುರ ಹೇಳಿದರು.

ಪಟ್ಟಣದ ನಿಂಗಮ್ಮ ಹೂಗಾರ ಪದವಿ ಪೂರ್ವ ಕಾಲೇಜಿನಲ್ಲಿ ಗುರುವಾರ ಆಯೋಜಿಸಿದ್ದ ಮೈಸೂರಿನ ಕವಿತಾ ಕಲಾ ತಂಡದ 'ಕೌದಿ' ಏಕವ್ಯಕ್ತಿ ನಾಟಕ ಪ್ರದರ್ಶನದ ಬಳಿಕ ಅವರು ಮಾತನಾಡಿದರು.

ಗದಗಿನ ತೋಂಟದಾರ್ಯ ಮಠದ ಡಾ. ಸಿದ್ಧಲಿಂಗ ಸ್ವಾಮೀಜಿ ಅವರ ಆಶಯದಂತೆ ಪೌರಕಾರ್ಮಿಕರು, ಒಡ್ಡರು, ಭೋವಿ, ಹರಣಶಿಕಾರಿ ಸೇರಿದಂತೆ ಅಲಕ್ಷಿತ ಸಮುದಾಯಗಳ ಮಕ್ಕಳು ಹಾಗೂ ಅನಾಥ ಬಾಲಕಿಯರಿಗೆ ಒಂದನೇ ತರಗತಿಯಿಂದ ಪಿಯುಸಿ ವರೆಗೆ ಉಚಿತ ಶಿಕ್ಷಣ ನೀಡಲಾಗುತ್ತಿದೆ. ಪ್ರತಿ ವಿದ್ಯಾರ್ಥಿಗೆ ಸುಮಾರು ಒಂದೂವರೆ ಲಕ್ಷ ರೂಪಾಯಿ ವೆಚ್ಚವಾಗುತ್ತಿದ್ದು, ಸಮಾಜದ ವಂಚಿತ ವರ್ಗದ ಮಕ್ಕಳು ಶಿಕ್ಷಣದ ಮೂಲಕ ಮುಖ್ಯವಾಹಿನಿಗೆ ಬರಬೇಕು ಎಂಬುದು ಈ ಯೋಜನೆಯ ಉದ್ದೇಶವಾಗಿದೆ ಎಂದು ತಿಳಿಸಿದರು.

ನಾಟಕಕಾರ ಗಣೇಶ ಅಮೀನಗಡ ಅವರ ಕೃತಿ 'ಕೌದಿ'ಯನ್ನು ಕಲಬುರಗಿ ರಂಗಾಯಣದ ಕಲಾವಿದೆ ಭಾಗ್ಯಶ್ರೀ ಬಿ. ಪಾಳಾ ಏಕವ್ಯಕ್ತಿ ರೂಪದಲ್ಲಿ ಪರಿಣಾಮಕಾರಿಯಾಗಿ ಪ್ರಸ್ತುತಪಡಿಸಿದರು. ಕೌದಿ ಹೊಲಿಯುವ ಗೊಂದಲಿಗರು, ದಲಿತರು ಸೇರಿದಂತೆ ಅಲಕ್ಷಿತ ಸಮುದಾಯಗಳ ಬದುಕಿನ ಸಂಕಷ್ಟ, ಹೋರಾಟ ಮತ್ತು ಸಾಮಾಜಿಕ ವಾಸ್ತವವನ್ನು ನಾಟಕ ಮನಮುಟ್ಟುವ ರೀತಿಯಲ್ಲಿ ಅನಾವರಣಗೊಳಿಸಿತು.

ಈ ನಾಟಕವನ್ನು ಜಗದೀಶ್ ಆರ್. ಜಾಣಿ ವಿನ್ಯಾಸಗೊಳಿಸಿ ಸಂಗೀತ ನೀಡುವ ಮೂಲಕ ನಿರ್ದೇಶಿಸಿದ್ದು, ಸಂಗೀತ ಹಾಗೂ ಬೆಳಕಿನ ನಿರ್ವಹಣೆಯನ್ನು ಅಭಿಷೇಕ್ ನಿರ್ವಹಿಸಿದರು.

ನಾಟಕ ವೀಕ್ಷಿಸಿದ ವಿದ್ಯಾರ್ಥಿಗಳು ಕೌದಿಯ ಮಹತ್ವ, ಅದನ್ನು ಹೊಲಿಯುವವರ ಜೀವನದ ಸವಾಲುಗಳು ಹಾಗೂ ಸಂಕಷ್ಟಗಳನ್ನು ಅರಿತುಕೊಂಡರು. ತಮ್ಮ ಮನೆಗಳಲ್ಲಿ ಬಳಸುವ ಕೌದಿಯ ಹಿಂದೆ ಅಡಗಿರುವ ಶ್ರಮ ಮತ್ತು ಬದುಕಿನ ಕಥೆಯನ್ನು ಮನದಟ್ಟು ಮಾಡಿಕೊಂಡರು.

ಈ ಸಂದರ್ಭದಲ್ಲಿ ವೀರೇಶ ಶಾನುಭೋಗರ, ಎಸ್.ವಿ. ಕುರಡಗಿ, ಕಿರಣ ಬೂದಿಹಾಳ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ನಾಟಕ ಪ್ರದರ್ಶನದ ಬಳಿಕ ಕಲಾವಿದೆ ಭಾಗ್ಯಶ್ರೀ ಬಿ. ಪಾಳಾ ಅವರನ್ನು ಸನ್ಮಾನಿಸಲಾಯಿತು.

### ಇಷ್ಟಲಿಂಗ ಮಹಾಪೂಜೆ, ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಗೆ ಚಾಲನೆ

# ಬಿದ್ದವರನ್ನು ಎತ್ತಿ ನಿಲ್ಲಿಸುವುದೇ ನಿಜವಾದ ಧರ್ಮ



**ವಿಜಯಸಾಕ್ಷಿ ಸುದ್ದಿ, ಗದಗ**

ಧರ್ಮವು ಯಾವುದೇ ವ್ಯಕ್ತಿ, ಜಾತಿ ಅಥವಾ ಸಮುದಾಯಕ್ಕೆ ಸೀಮಿತವಲ್ಲ. ಬಿದ್ದವರನ್ನು, ಬೀಳುತ್ತಿರುವವರನ್ನು ಹಾಗೂ ಬೀಳುವ ಸ್ಥಿತಿಯಲ್ಲಿರುವವರನ್ನು ಎತ್ತಿ ನಿಲ್ಲಿಸುವುದೇ ನಿಜವಾದ ಧರ್ಮ ಎಂದು ಕಾಶಿ ಜಂಗಮವಾಡಿಮಠದ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದರು ಹೇಳಿದರು.

ನಗರದ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಗದಗ-ಬೆಟಗೇರಿ ಜಗದ್ಗುರು ಪಂಚಾಚಾರ್ಯ ಸೇವಾ ಸಂಘದ ವತಿಯಿಂದ ಆಯೋಜಿಸಿದ್ದ ಸಂಗೀತಯುಕ್ತ ಇಷ್ಟಲಿಂಗ ಮಹಾಪೂಜೆ ಹಾಗೂ 'ಶ್ರೀ ಸಿದ್ಧಾಂತ ಶಿಖಾಮಣಿ' ಆಧ್ಯಾತ್ಮಿಕ ಪ್ರವಚನ ಮಾಲಿಕೆಯ ಉದ್ಘಾಟನಾ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು.

ಯುವಕರು ಮೊಬೈಲ್ ಹಾಗೂ ಪಾಶ್ಚಾತ್ಯ ಸಂಸ್ಕೃತಿಯ ಪ್ರಭಾವದಿಂದ ಹೊರಬಂದು ಭಾರತೀಯ ಸಂಸ್ಕೃತಿ, ಸಂಸ್ಕಾರ, ಗುರು-ಹಿರಿಯರಿಗೆ ಗೌರವ ಮತ್ತು ಮಾತೃಭೂಮಿಯ ಮೇಲಿನ ಅಭಿಮಾನ ಬೆಳೆಸಿಕೊಳ್ಳಬೇಕು. ಬಾಲ್ಯದಿಂದಲೇ ಧರ್ಮ ಸಂಸ್ಕಾರಗಳನ್ನು ಬೆಳೆಸಿದಾಗ ಮಾತ್ರ ಭವ್ಯ ಭಾರತದ ನಿರ್ಮಾಣ ಸಾಧ್ಯ ಎಂದು ಕರೆ ನೀಡಿದರು.

ಸನಾತನ ಧರ್ಮವು ಶಾಶ್ವತ ಜೀವನ ಪದ್ಧತಿಯಾಗಿದ್ದು, ವೀರಶೈವ ಮತ್ತು ಲಿಂಗಾಯತ ಬೇರೆ ಬೇರೆ ಅಲ್ಲ. ಸಮಾಜದಲ್ಲಿ ಭಿನ್ನಾಭಿಪ್ರಾಯ ಮೂಡಿಸುವ ಪ್ರಯತ್ನಗಳನ್ನು ತೊರೆದು ಸಮುದಾಯದ ಏಕತೆಗಾಗಿ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಧರ್ಮಸಭೆಯಲ್ಲಿ ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಕ್ತಿಮಂದಿರದ ಪೂಜ್ಯ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸಿದರು. ಈಶ್ವರಯ್ಯ ವಿ. ಹಿರೇಮಠ ಕಾರ್ಯಕ್ರಮ ಉದ್ಘಾಟಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಚಂದ್ರು ಬಾಳಿಹಳ್ಳಿಮಠ, ಕಳೆದ 28 ವರ್ಷಗಳಿಂದ ನಡೆಯುತ್ತಿರುವ ಸಿದ್ಧಾಂತ ಶಿಖಾಮಣಿ ಪ್ರವಚನ ಮಾಲಿಕೆ ಧಾರ್ಮಿಕ ಜಾಗೃತಿ ಹಾಗೂ ವೈಚಾರಿಕತೆ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದರು.

ಕಾರ್ಯಕ್ರಮದಲ್ಲಿ ಹಲವರಿಗೆ ಗುರುರಕ್ಷೆ ನೀಡಿ ಆಶೀರ್ವದಿಸಲಾಯಿತು. ಮಹೇಶ ಕುಂದ್ರಾಳಹಿರೇಮಠ ಸಂಗೀತ ಸೇವೆ ಸಲ್ಲಿಸಿದರು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

> ಧರ್ಮವು ಯಾವುದೇ ಒಂದು ವ್ಯಕ್ತಿ, ಜಾತಿ ಅಥವಾ ಸಮುದಾಯಕ್ಕೆ ಸೀಮಿತವಲ್ಲ. ಬಿದ್ದವರನ್ನು ಎತ್ತಿ ನಿಲ್ಲಿಸುವುದೇ ನಿಜವಾದ ಧರ್ಮ.
> – ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದರು

# ಮೊಬೈಲ್‌ನಿಂದ ದೂರವಿರಿ, ಪುಸ್ತಕಕ್ಕೆ ಹತ್ತಿರವಿರಿ: ಬುಡ್ಡಿ ಬಸವರಾಜ್



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಮಕ್ಕಳ ಭವಿಷ್ಯ ರೂಪಿಸಿಕೊಳ್ಳಲು ಮೊಬೈಲ್‌ಗಿಂತ ಪುಸ್ತಕವೇ ಉತ್ತಮ ಸಂಗಾತಿ. ವಿದ್ಯಾರ್ಥಿಗಳು ಮೊಬೈಲ್‌ನಿಂದ ದೂರವಿದ್ದು ಓದಿನತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಬುಡ್ಡಿ ಬಸವರಾಜ್ ಹೇಳಿದರು.

ತಾಲೂಕಿನ ಕೆಚ್ಚಿನಬಂಡಿ ಗ್ರಾಮದಲ್ಲಿ ಜನಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಹೆಚ್ಚಿನ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಉಚಿತ ನೋಟ್‌ಬುಕ್ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪೋಷಕರು ಕೂಲಿ ಮಾಡಿ ಮಕ್ಕಳ ಭವಿಷ್ಯ ರೂಪಿಸಲು ಶ್ರಮಿಸುತ್ತಿದ್ದಾರೆ. ಅವರ ಕಷ್ಟವನ್ನು ಅರಿತು ವಿದ್ಯಾರ್ಥಿಗಳು ಸಂಸ್ಕಾರ, ಶಿಸ್ತು ಬೆಳೆಸಿಕೊಂಡು ಶಿಕ್ಷಕರು ಹೇಳುವ ಪಾಠದತ್ತ ಗಮನ ಹರಿಸಬೇಕು. ಸರ್ಕಾರಿ ಶಾಲೆಗಳ ಉಳಿವು-ಬೆಳವಣಿಗೆ ಗ್ರಾಮೀಣ ವಿದ್ಯಾರ್ಥಿಗಳ ಕೈಯಲ್ಲಿದೆ ಎಂದು ಹೇಳಿದರು.

ಪತ್ರಕರ್ತ ಸಿ. ಶಿವಾನಂದ್ ಮಾತನಾಡಿ, ಯಾವುದೇ ಸ್ವಾರ್ಥವಿಲ್ಲದೆ ಜನಸೇವಾ ಟ್ರಸ್ಟ್ ಕೈಗೊಂಡಿರುವ ಶಿಕ್ಷಣ ಸೇವೆ ಮಾದರಿಯಾಗಿದ್ದು, ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡುವ ವ್ಯಕ್ತಿಗಳಾಗಬೇಕು ಎಂದು ಕರೆ ನೀಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಉಮಾಪತಿ ಶೆಟ್ಟರ್ ಮಾತನಾಡಿ, ಉಚಿತ ನೋಟ್‌ಬುಕ್ ವಿತರಣೆಯಂತಹ ಕಾರ್ಯಕ್ರಮಗಳು ಗ್ರಾಮೀಣ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಹೊಸ ಉತ್ತೇಜನ ನೀಡುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಆರು ಮಂದಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಅಲ್ಲದೆ 98 ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ವಿಶ್ವನಾಥ ಭಾವಿಕಟ್ಟಿ, ಕಾರ್ಯದರ್ಶಿ ರಾಜಾಹುಲಿ, ಕೋಡಿಹಳ್ಳಿ ಮಂಜುನಾಥ, ಟಿ. ರಮೇಶ್, ಎಸ್‌ಡಿಎಂಸಿ ಅಧ್ಯಕ್ಷ ವಿ. ಅಶೋಕ್, ಶಿವಕುಮಾರ್ ದುರುಗಪ್ಪ, ಕೆಇಬಿ ಮಲ್ಲೇಶ್, ವಿರೂಪಾಕ್ಷಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು. ಉಪನ್ಯಾಸಕ ಬಸವರಾಜ್ ಕಾರ್ಯಕ್ರಮ ನಿರೂಪಿಸಿದರು. ಮಲ್ಲೇಶ್ ವಂದಿಸಿದರು.

# 110 ವಿದ್ಯಾರ್ಥಿಗಳಿಗೆ ಉಚಿತ ರಕ್ತದ ಗುಂಪು ತಪಾಸಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ರಕ್ತವು ಮಾನವ ಜೀವ ಉಳಿಸುವ ಅಮೂಲ್ಯ ಸಂಪನ್ಮೂಲವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ರಕ್ತದ ಗುಂಪಿನ ಬಗ್ಗೆ ಮಾಹಿತಿ ಹೊಂದಿರುವುದು ಅತ್ಯಗತ್ಯ ಎಂದು ರಕ್ತ ತಪಾಸಕ ಡಾ. ದತ್ತಾತ್ರೇಯ ವೈಕುಂಠೆ ಹೇಳಿದರು.

ಬೆಟಗೇರಿಯ ಶರಣಬಸವೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಗದಗ ಭಾವಸಾರ ವ್ಹಿಜನ್ ವತಿಯಿಂದ ಆಯೋಜಿಸಿದ್ದ ವಿದ್ಯಾರ್ಥಿಗಳ ಉಚಿತ ರಕ್ತದ ಗುಂಪು ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು, ರಕ್ತದ ಉಪಯುಕ್ತತೆ, ವಿವಿಧ ರಕ್ತದ ಗುಂಪುಗಳು ಹಾಗೂ ತುರ್ತು ಸಂದರ್ಭಗಳಲ್ಲಿ ರಕ್ತದಾನದ ಮಹತ್ವವನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ಸಲಹೆ ನೀಡಿದರು.

ಶಿಬಿರಕ್ಕೆ ಆಕಸ್ಮಿಕವಾಗಿ ಭೇಟಿ ನೀಡಿದ ಮುಖಂಡರಾದ ಮೋಹನ ಲಿಂಬಿಕಾಯಿ ಹಾಗೂ ಎಂ.ಕೆ. ಲಮಾಣಿ, ಸಮಾಜಮುಖಿ ಕಾರ್ಯವಾಗಿ ಉಚಿತ ರಕ್ತದ ಗುಂಪು ತಪಾಸಣೆ ನಡೆಸಿರುವ ಗದಗ ಭಾವಸಾರ ವ್ಹಿಜನ್‌ನ ಕಾರ್ಯವನ್ನು ಶ್ಲಾಘಿಸಿದರು.

ಶಿಬಿರದಲ್ಲಿ 110 ವಿದ್ಯಾರ್ಥಿಗಳ ರಕ್ತದ ಗುಂಪು ತಪಾಸಣೆ ನಡೆಸಿ, ಅವರಿಗೆ ರಕ್ತದ ಗುಂಪಿನ ಗುರುತಿನ ಕಾರ್ಡ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಶರಣಬಸವೇಶ್ವರ ಶಿಕ್ಷಣ ಸಮಿತಿಯ ಅಧ್ಯಕ್ಷ ಸಿದ್ಧಣ್ಣ ಕಾತರಕಿ, ಕಾರ್ಯದರ್ಶಿ ಎಂ.ಎಸ್. ಮಲ್ಲಾಪೂರ, ಶಿಕ್ಷಕರಾದ ಎಸ್.ಎ. ನಾಗರಳ್ಳಿ, ಎಚ್.ಎಂ. ಕೊರವರ, ಎಸ್.ಜಿ. ಘೋಡ್ಕೆ, ಗದಗ ಭಾವಸಾರ ವ್ಹಿಜನ್ ಅಧ್ಯಕ್ಷ ಶ್ರೀಪಾದ ವೈಕುಂಠೆ ಹಾಗೂ ಕಾರ್ಯದರ್ಶಿ ಸುಜಾತಾ ವೈಕುಂಠೆ ಉಪಸ್ಥಿತರಿದ್ದರು. ಶಾಲೆಯ ಮುಖ್ಯೋಪಾಧ್ಯಾಯ ಕೆ.ಬಿ. ಅರ್ಕಸಾಲಿ ಸ್ವಾಗತಿಸಿ, ವಂದಿಸಿದರು.

# ನೇತ್ರದಾನದ ಮೂಲಕ ಮಾನವೀಯತೆ ಮೆರೆದ ಪಾರ್ವತಿಬಾಯಿ ಚವ್ಹಾಣ ಕುಟುಂಬ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವೀರಸಾವರ್ಕರ ರಸ್ತೆಯ ಮರಾಠಾ ಮಂಡಳದ ಸಮೀಪದ ಚಂದ್ರಮಹಲ್ ನಿವಾಸಿ ಶ್ರೀಮತಿ ಪಾರ್ವತಿಬಾಯಿ ಮೋಹನಲಾಲಸಾ ಚವ್ಹಾಣ (98) ಅವರು ಜುಲೈ 16ರಂದು ನಿಧನರಾದರು.

ಮೃತರ ಅಂತ್ಯಕ್ರಿಯೆ ಶುಕ್ರವಾರ ನೆರವೇರಿತು. ಪಾರ್ವತಿಬಾಯಿ ಅವರು ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ನಿಧನದ ಸುದ್ದಿ ತಿಳಿಯುತ್ತಿದ್ದಂತೆಯೇ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಕುಟುಂಬಸ್ಥರನ್ನು ಸಂಪರ್ಕಿಸಿ ನೇತ್ರದಾನದ ಮಹತ್ವದ ಬಗ್ಗೆ ಮನವರಿಕೆ ಮಾಡಿ ಕೊಟ್ಟರು. ಕುಟುಂಬಸ್ಥರು ಉದಾರ ಮನಸ್ಸಿನಿಂದ ನೇತ್ರದಾನಕ್ಕೆ ಸಮ್ಮತಿ ಸೂಚಿಸಿದ ಹಿನ್ನೆಲೆಯಲ್ಲಿ ಗದಗ ಜಿಮ್ಸ್ ಆಸ್ಪತ್ರೆಯ ತಜ್ಞ ವೈದ್ಯರ ತಂಡ ನೇತ್ರಗಳನ್ನು ಸಂಗ್ರಹಿಸಿ ಯಶಸ್ವಿಯಾಗಿ ನೇತ್ರದಾನ ಪ್ರಕ್ರಿಯೆ ಪೂರ್ಣಗೊಳಿಸಿತು. 98 ವರ್ಷಗಳ ಸಾರ್ಥಕ ಬದುಕು ನಡೆಸಿದ ಪಾರ್ವತಿಬಾಯಿ ಅವರು ಸಾವಿನಲ್ಲೂ ನೇತ್ರದಾನದ ಮೂಲಕ ಅಂಧರ ಬಾಳಿಗೆ ಬೆಳಕಾಗುವ ಮಾನವೀಯ ಕಾರ್ಯಕ್ಕೆ ಕುಟುಂಬಸ್ಥರು ಕೈಜೋಡಿಸಿದ್ದು, ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಕಾರ್ಯದರ್ಶಿ ಲಿಂಗರಾಜ ತೋಟದ, ರಮೇಶ ಶಿಗ್ಲಿ, ರೇಣುಕಪ್ರಸಾದ ಹಿರೇಮಠ, ಅಶ್ವಥ್ ಸುಲಾಖೆ, ರಾಜಣ್ಣ ಮಲ್ಲಾಡದ ಹಾಗೂ ಕುಟುಂಬಸ್ಥರು ಉಪಸ್ಥಿತರಿದ್ದರು.

# ಮಕ್ಕಳಲ್ಲಿ ಮಾನವೀಯ ಮೌಲ್ಯ ಬೆಳೆಸುವಲ್ಲಿ ಪಾಲಕರ ಪಾತ್ರ ಮಹತ್ವದ್ದು




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳಿಗೆ ಕೇವಲ ಶಿಕ್ಷಣ ನೀಡುವುದಷ್ಟೇ ಅಲ್ಲ, ಮಾನವೀಯ ಮೌಲ್ಯಗಳು, ಶಿಸ್ತು ಹಾಗೂ ಉತ್ತಮ ಸಂಸ್ಕಾರಗಳನ್ನು ಬೆಳೆಸುವ ಜವಾಬ್ದಾರಿ ಪಾಲಕರು ಮತ್ತು ಶಿಕ್ಷಕರ ಮೇಲಿದೆ ಎಂದು ಕೆಎಸ್‌ಎಸ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಿವಾನಂದ ಗೋಗೇರಿ ಹೇಳಿದರು.

ಪಟ್ಟಣದ ಕೆಎಸ್‌ಎಸ್ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಪಾಲಕರ ಸಭೆಯಲ್ಲಿ ಮಾತನಾಡಿದ ಅವರು, ಶಾಲೆಗೆ ಹೋಗುವ ಮಕ್ಕಳ ಬಗ್ಗೆ ಪಾಲಕರು ನಿರಂತರ ಗಮನಹರಿಸಬೇಕು. ಮಕ್ಕಳ ಸ್ನೇಹ ಬಳಗ, ದಿನನಿತ್ಯದ ಚಟುವಟಿಕೆಗಳು ಹಾಗೂ ಕಲಿಕೆಯ ಬಗ್ಗೆ ಕಾಳಜಿ ವಹಿಸಿದರೆ ಅವರ ಭವಿಷ್ಯ ಉಜ್ವಲವಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಶಾಲೆಯಿಂದ ಮನೆಗೆ ಬಂದ ನಂತರ ಮಕ್ಕಳು ಕಲಿತ ಪಾಠಗಳು, ಶಿಕ್ಷಕರು ಬೋಧಿಸಿದ ವಿಷಯಗಳು ಹಾಗೂ ಶಾಲೆಯಲ್ಲಿನ ಚಟುವಟಿಕೆಗಳ ಬಗ್ಗೆ ಪಾಲಕರು ವಿಚಾರಿಸಿದರೆ, ಮಕ್ಕಳಲ್ಲಿ ಕಲಿಕೆಯ ಆಸಕ್ತಿ ಹೆಚ್ಚುವುದರ ಜೊತೆಗೆ ಶಿಕ್ಷಣದ ಗುಣಮಟ್ಟವೂ ಉತ್ತಮಗೊಳ್ಳುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ಪಾಲಕರ ಪ್ರತಿನಿಧಿಗಳಾದ ಗಣೇಶ ನವಲಗುಂದ, ಯಲ್ಲಪ್ಪ ಕಂಟೆಣ್ಣವರ, ಈರಣ್ಣ ಶಿರಗುಂಪಿ ಸೇರಿದಂತೆ ಹಲವರು ಮಕ್ಕಳ ಶೈಕ್ಷಣಿಕ ಪ್ರಗತಿ ಕುರಿತು ಅಭಿಪ್ರಾಯ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಉಣಕಲ್, ಬಿ.ಪಿ. ಉಪ್ಪಿನ, ಎ.ಟಿ. ಅರಕಸಾಲಿ, ವಿ.ಸಿ. ಜೋಗಿ, ವೆಂಕಟಾಪುರ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಬಸವರಾಜ ದೇಸಾಯಿಪಟ್ಟಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

### ಗದಗ ತಾಲೂಕಿನ ನರಸಾಪೂರ ಇತಿಹಾಸ, ಮಾನವೀಯತೆ ಮತ್ತು ಸೂಫಿ ಸಂಗೀತದ ಅಪೂರ್ವ ಸಂಗಮ; ಪ್ರೇಕ್ಷಕರನ್ನು ಭಾವಲೋಕಕ್ಕೆ ಕರೆದೊಯ್ದ ಶಿವಮೊಗ್ಗ ರಂಗಾಯಣದ ಪ್ರಯೋಗ

# ಕಾದಂಬರಿಯನ್ನು ನೇಯ್ಗೆಯಂತೆ ಹಣೆದ ಸಂಗೀತಮಯ ರಂಗಕಾವ್ಯ ಸ್ವಾತಂತ್ರ್ಯದ ಓಟ

ಸ್ವಾತಂತ್ರ್ಯದ ಓಟ ನಾಟಕವನ್ನು ನಮ್ಮ ಗಜೇಂದ್ರಗಡದಲ್ಲಿ ಪ್ರದರ್ಶಿಸಬೇಕೆಂಬುದು ಬಹಳ ದಿನಗಳ ನನ್ನ ಕನಸಾಗಿತ್ತು. ಆದರೆ ವೈಯಕ್ತಿಕ ಕೆಲಸಗಳ ಒತ್ತಡದಿಂದ ಅದು ಸಾಧ್ಯವಾಗಲಿಲ್ಲ. ಈ ನಾಟಕವನ್ನು ನೋಡುವ ಅವಕಾಶಕ್ಕಾಗಿ ಕಾಯುತ್ತಿದ್ದ ನನಗೆ, ಗದಗ ನಗರದ ರಂಗಪರಿಸರದ ಗೆಳೆಯರು, ಲಿಂಗಾಯತ ಪ್ರಗತಿಶೀಲ ಸಂಘ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಜುಲೈ 15ರಂದು ಶ್ರೀ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ನಾಟಕ ಆಯೋಜಿಸಿದ್ದರಿಂದ, ಅದನ್ನು ಕಣ್ತುಂಬಿಕೊಳ್ಳುವ ಅವಕಾಶ ದೊರೆಯಿತು.

ಶಿವಮೊಗ್ಗ ರಂಗಾಯಣದ ಈ ಪ್ರಸ್ತುತಿಯನ್ನು ನಟರಾಜ್ ಹೊನ್ನವಳ್ಳಿ ನಿರ್ದೇಶಿಸಿದ್ದು, ಸಲ್ಮಾ ದಂಡಿನ ಸಹ ನಿರ್ದೇಶಕರಾಗಿ ಕೈಜೋಡಿಸಿದ್ದಾರೆ. ಬೋಳುವಾರು ಮಹಮದ್ ಕುಂಞ ಅವರ ಮಹತ್ವದ ಕಾದಂಬರಿಯನ್ನು ಮಂಜುನಾಥ ಗೋಮರದಹಳ್ಳಿ ಪರಿಣಾಮಕಾರಿಯಾಗಿ ರಂಗರೂಪಕ್ಕೆ ತಂದಿದ್ದಾರೆ.

ಸಾವಿರಕ್ಕೂ ಹೆಚ್ಚು ಪುಟಗಳ ಕಾದಂಬರಿಯನ್ನು ಬಿಗಿಯಾದ ರಂಗಪಠ್ಯವಾಗಿ ರೂಪಿಸುವುದು ಸುಲಭದ ಕೆಲಸವಲ್ಲ. ಆದರೆ ಈ ತಂಡ ಅದನ್ನು ಯಶಸ್ವಿಯಾಗಿ ಸಾಧಿಸಿದೆ. ಕಥೆಯ ಆತ್ಮಕ್ಕೆ ಧಕ್ಕೆಯಾಗದಂತೆ, ಅದರ ತಾತ್ವಿಕತೆಯನ್ನು ಉಳಿಸಿಕೊಂಡೇ ರಂಗಭಾಷೆಗೆ ಅನುವಾದಿಸಿರುವುದು ಈ ನಾಟಕದ ದೊಡ್ಡ ಸಾಧನೆ.

ಈ ರಂಗಪ್ರಯೋಗದ ಜೀವಾಳ ಸಂಗೀತ. ಗದಗ ಜಿಲ್ಲೆಯ ಅಬ್ಬಿಗೇರಿಯ ಪ್ರತಿಭಾವಂತ ಸಂಗೀತ ನಿರ್ದೇಶಕ ರಾಘವ



ಕಮ್ಮಾರ ಅವರ ಸಂಗೀತ ಸಂಯೋಜನೆ ಮತ್ತು ಗಾಯನ ಇಡೀ ನಾಟಕಕ್ಕೆ ಹೊಸ ಎತ್ತರ ನೀಡಿದೆ. ಸೂಫಿ ಸಂತರ ತತ್ತ್ವಪದಗಳು, ಕಬೀರ್ ಮತ್ತು ರವೀಂದ್ರನಾಥ ಠಾಗೋರ್ ಅವರ ಕಾವ್ಯದ ಸಾಲುಗಳು, ಬೋಡೆ ರಿಯಾಜ್ ಅವರ ಗಜಲ್‌ಗಳು ಕಥೆಯೊಳಗೆ ಸಹಜವಾಗಿ ಬೆರೆತು ಪ್ರೇಕ್ಷಕರನ್ನು ಮತ್ತೊಂದು ಅನುಭವಲೋಕಕ್ಕೆ ಕರೆದೊಯ್ಯುತ್ತವೆ.

ಉತ್ತರ ಕರ್ನಾಟಕದ ಸಾಂಸ್ಕೃತಿಕ ಗುರುತಾದ ಹೆಜ್ಜೆ ಮೇಳವನ್ನು ಬಳಸಿರುವ ರೀತಿ ವಿಶೇಷವಾಗಿ ಮನಸೆಳೆಯುತ್ತದೆ. ರಂಗದ ಮೇಲೆ ಹೆಜ್ಜೆ ಮೇಳ ಆರಂಭವಾದ ಕ್ಷಣವೇ ಎದ್ದು ಕುಣಿಯಬೇಕೆನಿಸುವಷ್ಟು ಜೀವಂತಿಕೆಯನ್ನು ಸಂಗೀತ ನೀಡುತ್ತದೆ.

ನಾಟಕವು ದೇಶ ವಿಭಜನೆಯ ಕಥೆಯನ್ನು ಮಾತ್ರ ಹೇಳುವುದಿಲ್ಲ. ವಿಭಜನೆಯಿಂದ ಒಡೆದ ಮಾನವ ಸಂಬಂಧಗಳು, ಧರ್ಮಾಂಧತೆಯ ನಡುವೆ ಉಳಿಯುವ ಮನುಷ್ಯತ್ವ ಮತ್ತು ಪ್ರೀತಿಯ ಹುಡುಕಾಟವನ್ನು ಅತ್ಯಂತ ಸೂಕ್ಷ್ಮವಾಗಿ ಕಟ್ಟಿಕೊಡುತ್ತದೆ. ಕರಾಚಿಯಿಂದ ಮುತ್ತುಪ್ಪಾಡಿಯವರೆಗೆ ಚಾಂದ್ ಅಲಿಯ ಪಯಣವು ಭೌಗೋಳಿಕ ಗಡಿಗಳಾಚೆಗೆ ಮನುಷ್ಯನ ಅಂತರಂಗದ ಹುಡುಕಾಟವಾಗುತ್ತದೆ.

ನಾಟಕದುದ್ದಕ್ಕೂ ಮೂವರು ಕಲಾವಿದರು ಚಾಂದ್ ಅಲಿಯ ವಿವಿಧ ಆಯಾಮಗಳನ್ನು ಪ್ರತಿನಿಧಿಸುವ ರೀತಿ ನಿರ್ದೇಶಕರ ಕಲ್ಪನಾಶಕ್ತಿಗೆ ಸಾಕ್ಷಿಯಾಗಿದೆ. ಬಿರ್ಲಾ ಹೌಸ್ ದೃಶ್ಯ ಹಾಗೂ ಗಾಂಧೀಜಿಯ ಹತ್ಯೆಯ ನಿರೂಪಣೆ ಅತ್ಯಂತ ಸಾಂಕೇತಿಕವಾಗಿ ಮೂಡಿಬಂದಿದ್ದು, ಹಿಂಸೆಯನ್ನು ತೋರಿಸದೇ ಅದರ ನೋವನ್ನು ಪ್ರೇಕ್ಷಕರ ಮನಸ್ಸಿಗೆ ತಲುಪಿಸುತ್ತದೆ.

ಸಹನಾ ಪಿಂಜಾರ ಅವರ ವೇಷಭೂಷಣ, ರಂಗಸಜ್ಜಿಕೆ, ಬೆಳಕಿನ ವಿನ್ಯಾಸ ಹಾಗೂ ಎಲ್ಲಾ ಕಲಾವಿದರ ಸಹಜ ಅಭಿನಯ ನಾಟಕವನ್ನು ಇನ್ನಷ್ಟು ಪರಿಣಾಮಕಾರಿಯನ್ನಾಗಿಸಿವೆ. ಆರಂಭದಲ್ಲಿ ನಾಟಕ ನಿಧಾನವಾಗಿ ಸಾಗಿದಂತೆ ಭಾಸವಾದರೂ, ನಂತರ ಮೂರೂವರೆ ಗಂಟೆಗಳ ಕಾಲ ಪ್ರೇಕ್ಷಕರನ್ನು ಹಿಡಿದಿಟ್ಟುಕೊಳ್ಳುವಲ್ಲಿ ಸಂಪೂರ್ಣ ಯಶಸ್ವಿಯಾಗಿದೆ.

ಈ ಲೇಖನದಲ್ಲಿ ನಾನು ನಾಟಕದ ಕಥೆಯನ್ನು ವಿಶ್ಲೇಷಿಸಿಲ್ಲ. ಒಬ್ಬ ಪ್ರೇಕ್ಷಕನಾಗಿ ನನಗಾದ ಅನುಭವವನ್ನು ಮಾತ್ರ ಹಂಚಿಕೊಂಡಿದ್ದೇನೆ. 'ಸ್ವಾತಂತ್ರ್ಯದ ಓಟ' ಕೇವಲ ಒಂದು ನಾಟಕವಲ್ಲ; ಅದು ಇಂದಿನ ಸಮಾಜದಲ್ಲಿ ಹೆಚ್ಚುತ್ತಿರುವ ಅಸಹನೆಗೆ ಉತ್ತರ ಹುಡುಕುವ ಮಾನವೀಯ ಚಿಂತನೆಯ ರಂಗಯಾನ. ಪ್ರತಿಯೊಬ್ಬರೂ ಒಮ್ಮೆ ನೋಡಲೇಬೇಕಾದ, ಅನುಭವಿಸಲೇಬೇಕಾದ ಅಪರೂಪದ ರಂಗಪ್ರಯೋಗ.

ಇಂತಹ ಮಹತ್ವದ ಪ್ರಯೋಗವನ್ನು ಯಶಸ್ವಿಯಾಗಿ ರಂಗಕ್ಕೇರಿಸಿದ ಶಿವಮೊಗ್ಗ ರಂಗಾಯಣ, ನಿರ್ದೇಶಕ ನಟರಾಜ್ ಹೊನ್ನವಳ್ಳಿ, ಸಹ ನಿರ್ದೇಶಕಿ ಸಲ್ಮಾ ದಂಡಿನ, ಕೃತಿಕಾರ ಬೋಳುವಾರು ಮಹಮದ್ ಕುಂಞ, ರಂಗರೂಪಾಂತರಕಾರ ಮಂಜುನಾಥ ಗೋಮರದಹಳ್ಳಿ, ಸಂಗೀತ ನಿರ್ದೇಶಕ ರಾಘವ ಕಮ್ಮಾರ ಹಾಗೂ ಇಡೀ ರಂಗತಂಡ ಅಭಿನಂದನೆಗೆ ಅರ್ಹರು.

ಈ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಿದ ಪರಮಪೂಜ್ಯ ಶ್ರೀ ಜಗದ್ಗುರು ತೋಂಟದ ಸಿದ್ಧರಾಮ ಮಹಾಸ್ವಾಮಿಗಳಿಗೆ ಕೃತಜ್ಞತೆಗಳು. ನಾಟಕ ಆಯೋಜನೆಗೆ ಶ್ರಮಿಸಿದ ಜಿ.ಬಿ. ಪಾಟೀಲ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಗದಗದ ಕಲಾಪ್ರೇಮಿಗಳು ಹಾಗೂ ಎಲ್ಲ ಸಂಘಟಕರಿಗೂ ಅಭಿನಂದನೆಗಳು.

ಇಂತಹ ಗುಣಮಟ್ಟದ ನಾಟಕಗಳು ರಾಜ್ಯದ ಮೂಲೆಮೂಲೆಗೂ ತಲುಪಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ನಾಟಕ ಅಕಾಡೆಮಿ ಇಂತಹ ರಂಗಪ್ರಯೋಗಗಳಿಗೆ ಇನ್ನಷ್ಟು ಪ್ರೋತ್ಸಾಹ ನೀಡಿ ರಾಜ್ಯದ ವಿವಿಧ ನಗರಗಳಲ್ಲಿ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಬೇಕು ಎಂಬುದು ನನ್ನ ಮನವಿ.



**–ಆರ್.ಕೆ. ಬಾಗವಾನ, ಶಿಕ್ಷಕರು, ಗೋಗೇರಿ**

## ಸಂಕ್ಷಿಪ್ತ ಸುದ್ದಿಗಳು

# ತರಬೇತಿಗಳು ಮಹಿಳೆಯರ ಸ್ವಾವಲಂಬಿ ಬದುಕಿಗೆ ಸಹಕಾರಿ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿವಿಧ ಕೌಶಲ್ಯ ತರಬೇತಿಗಳು ಮಹಿಳೆಯರ ಆರ್ಥಿಕ ಸಬಲೀಕರಣ ಹಾಗೂ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗಿವೆ ಎಂದು ಹರ್ಷಲತಾ ದೇಶಪಾಂಡೆ ಹೇಳಿದರು.

ಪಟ್ಟಣದ ರೇಣುಕಾ ಎಲ್ಲಮ್ಮ ದೇವಸ್ಥಾನದಲ್ಲಿ ಸಹ್ಯಾದ್ರಿ ಗ್ರಾಮೀಣಾಭಿವೃದ್ಧಿ-ನಗರಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ವತಿಯಿಂದ ಆಯೋಜಿಸಿದ್ದ ಉಚಿತ ಹರ್ಬಲ್ ಬ್ಯೂಟಿ ಪಾರ್ಲರ್ ಮತ್ತು ಮೇಕಪ್ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಇಂದಿನ ತಂತ್ರಜ್ಞಾನ ಯುಗದಲ್ಲಿಯೂ ಕೌಶಲ್ಯಾಧಾರಿತ ವೃತ್ತಿಗಳಿಗೆ ಹೆಚ್ಚಿನ ಬೇಡಿಕೆಯಿದೆ. ಮಹಿಳೆಯರು ವಿವಿಧ ತರಬೇತಿಗಳ ಸದುಪಯೋಗ ಪಡೆದು ಸ್ವಂತ ಉದ್ಯಮ ಆರಂಭಿಸುವ ಮೂಲಕ ಆರ್ಥಿಕವಾಗಿ ಸದೃಢರಾಗಬಹುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸುಮನ ಚವಡಿ ವಹಿಸಿದ್ದರು. ಗೀತಾ ಜಾಧವ, ಸುಧಾ ಪವಾರ, ವಿಜಯಲಕ್ಷ್ಮೀ ಕೋರಿ, ಶಾಂತಾ ಬೆನಕಣ್ಣವರ, ವಿಜಯ ನೀಲಗುಂದ, ಪ್ರಕಾಶ ಮದ್ದಿನ, ದಶರಥ ಕೋಟೆಗೌಡ್ರ, ಹಾಗೂ ತರಬೇತಿದಾರರು ಉಪಸ್ಥಿತರಿದ್ದರು

# ಬಿಸಿಎ ಅಂತಿಮ ಸೆಮಿಸ್ಟರ್‌ನಲ್ಲಿ ಮನೋರಮಾ ಕಾಲೇಜು ವಿದ್ಯಾರ್ಥಿಗಳ ಸಾಧನೆ






**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಮನೋರಮಾ ಮಹಾವಿದ್ಯಾಲಯದ ಬಿಸಿಎ (ಆರನೇ ಸೆಮಿಸ್ಟರ್) ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿ ಸಾಗರ ಅಗಡಿ 540 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದು, ಪಿ. ವಿಜಯಕುಮಾರ 527 ಅಂಕಗಳೊಂದಿಗೆ ದ್ವಿತೀಯ, ಸ್ನೇಹಾ ಮಾಲಶೆಟ್ಟಿ 521 ಅಂಕಗಳೊಂದಿಗೆ ತೃತೀಯ ಹಾಗೂ ಸುಜಾತಾ ಒದ್ದುಮಠ 519 ಅಂಕಗಳೊಂದಿಗೆ ನಾಲ್ಕನೇ ಸ್ಥಾನ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಅಧ್ಯಕ್ಷ ಎಸ್.ಎಂ. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಸಂಯೋಜಕಿ ಪ್ರೊ. ಸವಿತಾ ಪೂಜಾರ ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿ, ಶುಭ ಹಾರೈಸಿದ್ದಾರೆ.

### ಮುಳಗುಂದ- ಲಕ್ಷ್ಮೇಶ್ವರ, ಶಿರಹಟ್ಟಿ ರಸ್ತೆಯಲ್ಲಿ ಭಾರೀ ವಾಹನಗಳಿಂದ ಸಾರ್ವಜನಿಕರಿಗೆ ತೊಂದರೆ; ಆರ್‌ಟಿಓಗೆ ಕರವೇ ಮನವಿ

# ಸಂಚಾರಕ್ಕೆ ನಿರ್ಬಂಧ ವಿಧಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಮುಳಗುಂದಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ರಸ್ತೆಗಳಲ್ಲಿ ಸಂಚರಿಸುತ್ತಿರುವ ಭಾರೀ ಗಾತ್ರದ ವಿಂಡ್ ಮಿಲ್ ಉಪಕರಣ ಸಾಗಣೆ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಗದಗ ಜಿಲ್ಲಾ ಘಟಕವು ಪ್ರಾದೇಶಿಕ ಸಾರಿಗೆ ಅಧಿಕಾರಿ (ಆರ್‌ಟಿಒ) ಅವರಿಗೆ ಮನವಿ ಸಲ್ಲಿಸಿತು.

ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ ನೇತೃತ್ವದಲ್ಲಿ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ಗದಗಮುಳಗುಂದ ರಸ್ತೆ ಇತ್ತೀಚೆಗೆ ಅಭಿವೃದ್ಧಿಗೊಂಡಿದ್ದು, ಲಕ್ಷ್ಮೇಶ್ವರವರೆಗಿನ ರಸ್ತೆ ಕಾಮಗಾರಿ ಪ್ರಗತಿಯಲ್ಲಿದೆ. ಈ ಮಧ್ಯೆ, ಭಾರೀ ಗಾತ್ರದ ವಿಂಡ್ ಮಿಲ್ ಕಂಬಗಳು ಹಾಗೂ ಬ್ಲೇಡ್‌ಗಳನ್ನು ಸಾಗಿಸುವ ವಾಹನಗಳ ಓಡಾಟದಿಂದ ರಸ್ತೆ ಹಾನಿಯಾಗುವುದರ ಜೊತೆಗೆ ದ್ವಿಚಕ್ರ ವಾಹನ ಸವಾರರು ಹಾಗೂ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಆರೋಪಿಸಿದರು.

ಭಾರೀ ವಾಹನಗಳ ಸಂಚಾರದಿಂದ ರಸ್ತೆ ಮತ್ತಷ್ಟು ಹಾಳಾಗದಂತೆ ಹಾಗೂ ಸಾರ್ವಜನಿಕರ ಸುರಕ್ಷತೆಯ



> **ಭಾರೀ ಗಾತ್ರದ ವಿಂಡ್ ವಾಹನಗಳ ಸಂಚಾರವನ್ನು ಕೂಡಲೇ ನಿಯಂತ್ರಿಸಬೇಕು. ಇಲ್ಲದಿದ್ದರೆ ರಸ್ತೆ ತಡೆ ನಡೆಸಿ ಸಾವಿರಾರು ಕಾರ್ಯಕರ್ತರೊಂದಿಗೆ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು.**
> — **ಹನಮಂತಪ್ಪ ಎಚ್. ಅಬ್ಬಿಗೇರಿ**, ಜಿಲ್ಲಾಧ್ಯಕ್ಷ, ಕರ್ನಾಟಕ ರಕ್ಷಣಾ ವೇದಿಕೆ.

ದೃಷ್ಟಿಯಿಂದ ಕಾನೂನುಬದ್ಧ ಕ್ರಮ ಕೈಗೊಂಡು ಈ ರಸ್ತೆಯಲ್ಲಿ ಅಂತಹ ವಾಹನಗಳ ಓಡಾಟಕ್ಕೆ ತಡೆ ವಿಧಿಸಬೇಕು ಎಂದು ಕರವೇ ಆಗ್ರಹಿಸಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಮಾರುತಿ ಈಳಗೇರ, ಹನುಮಂತ ಪೂಜಾರ, ಬಸವರಾಜ ಮೇಟಿ, ಲಕ್ಷ್ಮೀ ಹಿತ್ತಲಮನಿ, ಹುಸೇನಸಾಬ ಕುಂಡಾಲಿ, ದಾವಲಸಾಬ ತಹಶೀಲ್ದಾರ, ರವಿ ಮಲ್ಲಾಡದ, ಮುಸ್ತಾಕ್ ದಾವಣಗೇರಿ, ಹುಸೇನ ಅಕ್ಕಿ, ರೂಪಾ ಅಬ್ಬಿಗೇರಿ, ಕಾಸೀಮಸಾಬ ವಾಲಿಕಾರ, ಇಸಾಕ್ ಅಹ್ಮದ್ ನದಾಫ್, ಸಿರಾಜ್ ಹೊಸಮನಿ, ಕು. ಎನ್. ರೇವಣ್ಣವರ, ಪ್ರಕಾಶ ಸಂದಿಖೇಡ, ಯೂನೂಸ್ ಗದಗ, ಪ್ರಶಾಂತ ನವಲಗುಂದ, ಶಂಭು ಹಿರೇಮಠ, ತೌಶೀಫ್ ಢಾಲಾಯತ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

### ಐದು ಕಿಲೋಮೀಟರ್‌ಗೆ ಅರ್ಧ ಗಂಟೆ ಹಾಳಾದ ರಸ್ತೆಯಿಂದ ಜನರ ಪರದಾಟ

# ಗುಂಡಿಗಳ ಗೂಡಾದ ಜಕ್ಕಲಿ- ಅಬ್ಬಿಗೇರಿ ರಸ್ತೆ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜಕ್ಕಲಿಅಬ್ಬಿಗೇರಿ ಸಂಪರ್ಕ ರಸ್ತೆಯ ದುಸ್ಥಿತಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಕೇವಲ ಐದು ಕಿಲೋಮೀಟರ್ ಕ್ರಮಿಸಲು ಅರ್ಧ ಗಂಟೆ ಬೇಕಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ರಸ್ತೆ ಸಂಪೂರ್ಣ ಹಾಳಾಗಿದ್ದು, ತಕ್ಷಣ ಮರುಡಾಂಬರೀಕರಣ ಕೈಗೊಳ್ಳುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಹಿಂದೊಮ್ಮೆ ಡಾಂಬರು ರಸ್ತೆಯಾಗಿದ್ದ ಈ ಮಾರ್ಗ ಈಗ ಗುಂಡಿಗಳು, ಜಲ್ಲಿಕಲ್ಲುಗಳು ಮತ್ತು ಧೂಳಿನ ರಾಶಿಯಾಗಿ ಮಾರ್ಪಟ್ಟಿದೆ. ರಸ್ತೆಯುದ್ದಕ್ಕೂ ಡಾಂಬರು ಕಿತ್ತು ಹೋಗಿ ಎಲ್ಲೆಂದರಲ್ಲಿ ಆಳವಾದ ಗುಂಡಿಗಳು ನಿರ್ಮಾಣವಾಗಿರುವುದರಿಂದ ವಾಹನ ಸವಾರರು ಜೀವ ಕೈಯಲ್ಲಿ ಹಿಡಿದು ಸಂಚರಿಸುವಂತಾಗಿದೆ.

ಜಕ್ಕಲಿ, ಅಬ್ಬಿಗೇರಿ ಸೇರಿದಂತೆ ಯರೇಬೇಲೇರಿ, ಕುರಡಗಿ, ಕಿರಟಗೇರಿ, ಹುಯಿಲಗೋಳ, ಚಿಕ್ಕೊಪ್ಪ, ಹಿರೇಕೊಪ್ಪ ಹಾಗೂ ಗದಗ ನಗರಕ್ಕೆ ತೆರಳುವ ನೂರಾರು ಜನರಿಗೆ ಇದೇ ಪ್ರಮುಖ ಸಂಪರ್ಕ ರಸ್ತೆಯಾಗಿದೆ. ವ್ಯಾಪಾರಸ್ಥರು ಮತ್ತು ಗ್ರಾಮಸ್ಥರು ಪ್ರತಿದಿನ ಇದೇ ರಸ್ತೆಯಲ್ಲಿ ಓಡಾಡುತ್ತಿದ್ದರೂ, ರಸ್ತೆ ಹಾಳಾಗಿರುವುದರಿಂದ ಸಂಚಾರ ದುಸ್ತರವಾಗಿದೆ.

ರಸ್ತೆಯ ಅವ್ಯವಸ್ಥೆಯಿಂದ ವಾಹನಗಳ ಬಿಡಿಭಾಗಗಳು ಹಾಳಾಗುತ್ತಿದ್ದು, ವಾಹನ ದುರಸ್ತಿಗೆ ಅನಗತ್ಯ ವೆಚ್ಚವಾಗುತ್ತಿದೆ. ಮಳೆಗಾಲದಲ್ಲಿ ಗುಂಡಿಗಳಲ್ಲಿ ನೀರು ನಿಂತು ಅಪಘಾತಗಳ ಭೀತಿ ಮತ್ತಷ್ಟು ಹೆಚ್ಚಲಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ. ವರ್ಷಗಳಿಂದ ರಸ್ತೆ ದುರಸ್ತಿಯಾಗದಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಇನ್ನಾದರೂ ಅಧಿಕಾರಿಗಳು ನಿರ್ಲಕ್ಷ್ಯ ಬಿಟ್ಟು ಜಕ್ಕಲಿ ಅಬ್ಬಿಗೇರಿ ರಸ್ತೆಯ ಮರುಡಾಂಬರೀಕರಣಕ್ಕೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

### ಹೆಸರು ಬೆಳೆಯಲ್ಲಿ ಹಳದಿ ರೋಗದ ಪರಿಶೀಲನೆ; ಬಿತ್ತನೆಗೂ ಮುನ್ನ ಮುಂಜಾಗ್ರತಾ ಕ್ರಮ ಪಾಲಿಸಲು ರೈತರಿಗೆ ಸಲಹೆ

# ರೋಗ ನಿಯಂತ್ರಣಕ್ಕೆ ಬೀಜೋಪಚಾರ ಅತ್ಯಗತ್ಯ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಬೆಳೆಗಳಲ್ಲಿ ರೋಗಬಾಧೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಿ ಉತ್ತಮ ಇಳುವರಿ ಪಡೆಯಲು ಬಿತ್ತನೆಗೂ ಮುನ್ನ ಬೀಜೋಪಚಾರ ಮಾಡುವುದು ಅತ್ಯಗತ್ಯ ಎಂದು ಕೃಷಿ ವಿಜ್ಞಾನಿ ಡಾ. ಸಿ.ಎಂ. ರಫಿ ಹೇಳಿದರು.

ಪಟ್ಟಣದ ಸಮೀಪದ ಚಿಕ್ಕಹಂದಿಗೋಳ ಹಾಗೂ ಕುರ್ತಕೋಟಿ ಗ್ರಾಮದ ರೈತರ ಜಮೀನುಗಳಿಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳ ತಂಡ ಹಾಗೂ ಗದಗ ಕೃಷಿ ಇಲಾಖೆಯ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಹೆಸರು ಬೆಳೆಯಲ್ಲಿ ಕಾಣಿಸಿಕೊಂಡಿರುವ ಹಳದಿ ರೋಗವನ್ನು ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ಪ್ರತಿಯೊಬ್ಬ ರೈತರೂ ಬಿತ್ತನೆಗೂ ಮುನ್ನ ಕಡ್ಡಾಯವಾಗಿ ಬೀಜೋಪಚಾರ ಮಾಡಿ ಬಿತ್ತನೆ ನಡೆಸಬೇಕು. ಇದರಿಂದ ರೋಗಬಾಧೆ ನಿಯಂತ್ರಣವಾಗುವುದರ ಜೊತೆಗೆ ಉತ್ತಮ ಗುಣಮಟ್ಟದ ಇಳುವರಿಯನ್ನೂ ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ರೈತರು ಬಿತ್ತನೆ ಆರಂಭಿಸುವ ಮೊದಲು ಸಮೀಪದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಬೆಳೆ ಸಂರಕ್ಷಣೆ ಹಾಗೂ ಬಿತ್ತನೆ ಪೂರ್ವ ಮುಂಜಾಗ್ರತಾ ಕ್ರಮಗಳ ಕುರಿತು ತಾಂತ್ರಿಕ ಮಾಹಿತಿ ಪಡೆದು ಕೃಷಿ ಚಟುವಟಿಕೆ ಕೈಗೊಂಡರೆ ನಷ್ಟವನ್ನು ತಪ್ಪಿಸಿ ಉತ್ತಮ ಉತ್ಪಾದನೆ ಸಾಧಿಸಬಹುದು ಎಂದು ಸಲಹೆ ನೀಡಿದರು.

ಪರಿಶೀಲನಾ ತಂಡದಲ್ಲಿ ಡಾ. ಸಂಗನಶೆಟ್ಟಿ, ಡಾ. ಪ್ರಭಾವತಿ, ಗದಗ ಕೃಷಿ ಇಲಾಖೆಯ ಉಪನಿರ್ದೇಶಕಿ ಸ್ಫೂರ್ತಿ ಜಿ.ಎಸ್., ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೊರವಣ್ಣವರ, ಎಂ.ಎಸ್. ಕುಲಕರ್ಣಿ, ಕೃಷಿ ಅಧಿಕಾರಿಗಳಾದ ಬಸವರಾಜೇಶ್ವರಿ ಸಜ್ಜನವರ, ರಾಜೇಶ್ವರಿ ಚಿನಿವಾಲರ ಹಾಗೂ ರೈತರು ಉಪಸ್ಥಿತರಿದ್ದರು.

# ಬಸವದಳದಿಂದ ಇಂದು ಉಪನ್ಯಾಸ

**ವಿಜಯಸಾಕ್ಷಿ ಸುದ್ದಿ, ಗದಗ**

ಬಸವದಳ, ಗದಗ-ಬೆಟಗೇರಿ ವತಿಯಿಂದ ಪ್ರತಿವಾರದಂತೆ ನಡೆಯುವ 1707ನೇ ಶರಣ ಸಂಗಮ ಕಾರ್ಯಕ್ರಮವು ಜುಲೈ 19ರಂದು ಬೆಳಿಗ್ಗೆ 10 ಗಂಟೆಗೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ಶರಣ ಕುಂಬಾರ ಗುಂಡಯ್ಯನವರ ಕುರಿತು ಶರಣ ಸಾಹಿತಿ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ನೀಡಲಿದ್ದಾರೆ.

ಸವದಳದ ಅಧ್ಯಕ್ಷ ವಿ.ಕೆ. ಕರೇಗೌಡ್ರ ಅಧ್ಯಕ್ಷತೆ ವಹಿಸಲಿದ್ದು, ಜಕ್ಕಪ್ಪ ಕುಂಬಾರ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಬಸವದಳದ ಕಾರ್ಯಾಧ್ಯಕ್ಷ ಪ್ರಕಾಶ ಅಸುಂಡಿ ಮನವಿ ಮಾಡಿದ್ದಾರೆ.

### ಮರ-ಗಿಡಗಳನ್ನು ಬೆಳೆಸುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಒತ್ತು

# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ



**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ಮರ-ಗಿಡಗಳನ್ನು ಬೆಳೆಸುವ ಮೂಲಕ ಆರೋಗ್ಯಕರ ಸಮಾಜ ನಿರ್ಮಿಸಬೇಕಾಗಿದೆ ಎಂದು ನಿವೃತ್ತ ಹಿರಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಸುರೇಶ ಕುಂಬಾರ ಹೇಳಿದರು.

ನಗರದ ಕಳಸಾಪುರ ರಸ್ತೆಯ ರೋಟರಿ ಭವನದಲ್ಲಿ ರೋಟರಿ ಗದಗ ಸೆಂಟ್ರಲ್ ಆಯೋಜಿಸಿದ್ದ ಸಾಪ್ತಾಹಿಕ ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ನಾಳಿನ ಪೀಳಿಗೆ ಆರೋಗ್ಯಕರವಾಗಿರಬೇಕಾದರೆ ಇಂದಿನಿಂದಲೇ ಪ್ರತಿಯೊಬ್ಬರೂ ಒಂದೊಂದು ಗಿಡ ನೆಟ್ಟು ಪೋಷಿಸುವ ಸಂಕಲ್ಪ ಮಾಡಬೇಕು. ಟಿಮನೆಗೊಂದು ಮರ, ಊರಿಗೊಂದು ವನ ಎಂಬ ಪರಿಕಲ್ಪನೆ ಸಾಕಾರವಾಗಬೇಕು. ಅರಣ್ಯ ನಾಶವನ್ನು ತಡೆದು, ಬೀಜದುಂಡೆಗಳು ಹಾಗೂ ಸಸಿಗಳನ್ನು ವಿತರಿಸುವ ಮೂಲಕ ಪರಿಸರ ಜಾಗೃತಿ ಮೂಡಿಸಬೇಕು. ಮಾಲಿನ್ಯ ಹಾಗೂ ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣ ಇಂದಿನ ಅಗತ್ಯವಾಗಿದೆ ಎಂದು ಕಪ್ಪತ್ತಗುಡ್ಡ ಸೇರಿದಂತೆ ವಿವಿಧ ಉದಾಹರಣೆಗಳ ಮೂಲಕ ವಿವರಿಸಿದರು.

ಸಭೆಯ ಅಧ್ಯಕ್ಷತೆಯನ್ನು ರೋಟರಿ ಗದಗ ಸೆಂಟ್ರಲ್ ಅಧ್ಯಕ್ಷ ಮಲ್ಲಿಕಾರ್ಜುನ ಚಂದಪ್ಪನವರ ವಹಿಸಿದ್ದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ ಸುರೇಶ ಕುಂಬಾರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ವೇದಿಕೆಯಲ್ಲಿ ಕಾರ್ಯದರ್ಶಿ ಪರಶುರಾಮ ನಾಯ್ಕರ, ಖಜಾಂಚಿ ಚಂದ್ರಗೌಡ ಹಿರೇಗೌಡರ ಉಪಸ್ಥಿತರಿದ್ದರು.

ಸಭೆಯಲ್ಲಿ ರೋಟರಿ ರೆವಿನ್ಯೂ ಡಿಸ್ಟ್ರಿಕ್ಟ್ 3170 ರ ಮಾಜಿ ಅಸಿಸ್ಟೆಂಟ್ ಗವರ್ನರ್ ವಿ.ಕೆ. ಗುರುಮಠ, ಚೇತನ ಅಂಗಡಿ, ವೀರಣ್ಣ ಗಡಗಿ, ಡಾ. ಪ್ರಭು ಗಂಜಿಹಾಳ, ರಾಜಶೇಖರ ಉಮನಾಬಾದಿ, ಮಂಜುನಾಥ ಕಬಾಡಿ, ಶಂಭು ಬಾಣದ, ರಾಜು ಕುರುಡಗಿ, ರಾಜು ಕಂಟಿಗೊಣ್ಣವರ, ಕೆ.ವಿ. ಪಾಟೀಲ ಸೇರಿದಂತೆ ಹಲವರು ಭಾಗವಹಿಸಿದ್ದರು.

ಮಲ್ಲಿಕಾರ್ಜುನ ಚಂದಪ್ಪನವರ ಸ್ವಾಗತಿಸಿದರು. ಪರಶುರಾಮ ನಾಯ್ಕರ ಕಾರ್ಯಕ್ರಮ ನಿರೂಪಿಸಿದರೆ, ಚಂದ್ರಗೌಡ ಹಿರೇಗೌಡರ ವಂದಿಸಿದರು.

# ಗದಗ 100% ಎನ್ಯುಮರೇಷನ್ ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಚುರುಕುಗೊಂಡಿದ್ದು, ಜುಲೈ 17ರವರೆಗೆ 9,02,939 ಎನ್ಯುಮರೇಷನ್ ಫಾರ್ಮ್‌ಗಳನ್ನು ಮತದಾರರಿಗೆ ವಿತರಿಸಲಾಗಿದೆ.

ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳಿವೆ. ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುತ್ತಿದ್ದು, ಈ ಕಾರ್ಯವನ್ನು ಆಗಸ್ಟ್ 8ರವರೆಗೆ ವಿಸ್ತರಿಸಲಾಗಿದೆ.

ಈವರೆಗೆ 5,75,478 ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದ್ದು, ಉಳಿದ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಲು ಜಿಲ್ಲಾಡಳಿತ ಕ್ರಮ ಕೈಗೊಂಡಿದೆ.

### ಹಾಲಸ್ವಾಮಿ ಮಠದ ಸಮುದಾಯ ಭವನಕ್ಕೆ ₹25 ಲಕ್ಷ ಅನುದಾನ; ಶಾಸಕ ನೇಮಿರಾಜ್ ನಾಯಕ ಭೂಮಿಪೂಜೆ

# ಸಮಾಜದ ಸದೃಢತೆಗೆ ಮಠ-ಮಾನ್ಯಗಳ ಪಾತ್ರ ಅಮೂಲ್ಯ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಮಾಜದಲ್ಲಿ ಮಠ-ಮಾನ್ಯಗಳು ಬೆಳೆಯುವುದರಿಂದ ಧಾರ್ಮಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಮೌಲ್ಯಗಳು ಬಲಗೊಳ್ಳುತ್ತವೆ. ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯ ನೆಲೆಸಲು ಮಠಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಶಾಸಕ ಕೆ. ನೇಮಿರಾಜ ನಾಯ್ಕ್ ಹೇಳಿದರು.

ಪಟ್ಟಣದ ಹಾಲಸ್ವಾಮಿ ಮಠದಲ್ಲಿ ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಮಂಜೂರಾಗಿರುವ ₹25 ಲಕ್ಷ ವೆಚ್ಚದ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಭಾರತವು ಸನಾತನ ಸಂಸ್ಕೃತಿಯ ದೇಶವಾಗಿದ್ದು, ದೇವರು, ಧರ್ಮ ಹಾಗೂ ದೈವಕ್ಕೆ ವಿಶೇಷ ಸ್ಥಾನವಿದೆ.

> **ಹಾಲಸ್ವಾಮಿ ಮಠ ಜಾತ್ಯತೀತ ಧಾರ್ಮಿಕ ಚಟುವಟಿಕೆಗಳ ಮೂಲಕ ಸಮಾನತೆಯ ತತ್ವವನ್ನು ಸಾರುತ್ತಿದೆ. ಧಾರ್ಮಿಕ ಹಾಗೂ ಸಾರ್ವಜನಿಕ ಚಟುವಟಿಕೆಗಳಿಗೆ ಇದು ಯೋಗ್ಯವಾದ ಸ್ಥಳವಾಗಿದೆ.**
> — **ಕೆ. ನೇಮಿರಾಜ ನಾಯ್ಕ್**, ಶಾಸಕ

ಹಾಲಸ್ವಾಮಿ ಮಠವು ಜಾತ್ಯತೀತ ಧಾರ್ಮಿಕ ಚಟುವಟಿಕೆಗಳ ಮೂಲಕ ಸಮಾನತೆಯ ಸಂದೇಶ ಸಾರುತ್ತಿದ್ದು, ಪಟ್ಟಣದ ಹೃದಯಭಾಗದಲ್ಲಿರುವ ಈ ಮಠ ಸಾರ್ವಜನಿಕ ಕಾರ್ಯಕ್ರಮಗಳಿಗೂ ಸೂಕ್ತ ಸ್ಥಳವಾಗಿದೆ. ಈ ಹಿನ್ನೆಲೆಯಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡಲಾಗಿದೆ ಎಂದು ಹೇಳಿದರು.

ನಂದಿಪುರ ಕ್ಷೇತ್ರದ ಡಾ. ಮಹೇಶ್ವರ ಸ್ವಾಮೀಜಿ ಮಾತನಾಡಿ, ಹಾಲಸ್ವಾಮಿ ಮಠವು ಪುಣ್ಯಭೂಮಿಯಾಗಿದ್ದು, ಹಿಂದೆ ಇಲ್ಲಿ 98 ಜೋಡಿಗಳ ಸಾಮೂಹಿಕ ವಿವಾಹ ನಡೆದಿತ್ತು. ಉಜ್ಜಿನಿ ಜಗದ್ಗುರುಗಳ ಆಶೀರ್ವಾದ ಈ ಮಠದ ಮೇಲಿದೆ. ಮಠದ ಅಭಿವೃದ್ಧಿಗೆ ತಾವೂ ಸಹಕಾರ ನೀಡುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಮರಿಯಮ್ಮನಹಳ್ಳಿ ಸ್ವಾಮೀಜಿ, ಹಾಲ ಸಿದ್ದೇಶ್ವರ ಸ್ವಾಮೀಜಿ, ಪುರಸಭಾ ಸದಸ್ಯರಾದ ನೆಲ್ಲು ಇಸ್ಮಾಯಿಲ್ ಸಾಬ್, ದೀಪಕ್ ಕಠಾರೆ, ಜೆಡಿಎಸ್ ತಾಲೂಕು ಅಧ್ಯಕ್ಷ ವೈ. ಮಲ್ಲಿಕಾರ್ಜುನ, ಈ.ಕೆ. ಮೂರ್ತಿ, ಸಿದ್ದರಾಜು, ದೇವಿಪ್ರಸಾದ, ಹೆಚ್. ನಾಗೇಂದ್ರ ಕುಮಾರ, ತಿಪ್ಪೇಸ್ವಾಮಿ, ಬ್ಯಾಟಿ ನಾಗರಾಜ್, ಶ್ರೀಶೈಲ ಸೇರಿದಂತೆ ಅನೇಕ ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಪದವೀಧರ ಮತದಾರರ ನೋಂದಣಿ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಕರೆ

# ಪ್ರಜ್ಞಾವಂತರು ಅನ್ಯಾಯದ ವಿರುದ್ಧ ಧ್ವನಿಯೆತ್ತಬೇಕು: ಕೃಷ್ಣೇಗೌಡ ಪಾಟೀಲ



**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜದಲ್ಲಿ ನಡೆಯುವ ಅನ್ಯಾಯದ ವಿರುದ್ಧ ಪ್ರಜ್ಞಾವಂತ ನಾಗರಿಕರು ಧ್ವನಿಯೆತ್ತುವ ಮನೋಭಾವ ಬೆಳೆಸಿಕೊಳ್ಳಬೇಕು. ಜವಾಬ್ದಾರಿಯುತ ಸ್ಥಾನದಲ್ಲಿರುವವರು ಪಾರದರ್ಶಕವಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ದೇಶದ ಅಭಿವೃದ್ಧಿ ಹಾಗೂ ನಾಗರಿಕರ ಕಲ್ಯಾಣ ಸಾಧ್ಯ ಎಂದು ಕಾಂಗ್ರೆಸ್ ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಕೃಷ್ಣೇಗೌಡ ಎಚ್. ಪಾಟೀಲ ಹೇಳಿದರು.

ನಗರದ ಶಾರದ ವಿ.ಡಿ.ಎಸ್.ಟಿ.ಸಿ. ಕಾಲೇಜಿನಲ್ಲಿ ಪಶ್ಚಿಮ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಅಂಗವಾಗಿ ಆಯೋಜಿಸಿದ್ದ ಪದವೀಧರ ಮತದಾರರ ನೋಂದಣಿ ಅಭಿಯಾನ ಕುರಿತ ಶಿಕ್ಷಕರ ಸಭೆಯಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಅಭ್ಯರ್ಥಿ ಮೋಹನ್ ಲಿಂಬಿಕಾಯಿ ಮಾತನಾಡಿ, ಪಶ್ಚಿಮ ಪದವೀಧರ ಕ್ಷೇತ್ರವು ಪ್ರಜ್ಞಾವಂತ ಮತದಾರರನ್ನು ಹೊಂದಿರುವ ಪ್ರತಿಷ್ಠಿತ ಕ್ಷೇತ್ರವಾಗಿದೆ. ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಪದವೀಧರ ಮತದಾರರಾಗಿ ನೋಂದಣಿ ಮಾಡಿಸಿಕೊಳ್ಳಬೇಕು ಹಾಗೂ ಚುನಾವಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ತಮ್ಮನ್ನು ವಿಧಾನ ಪರಿಷತ್ತಿಗೆ ಆಯ್ಕೆ ಮಾಡಿದರೆ ಶಿಕ್ಷಕರ ಧ್ವನಿಯಾಗಿ ಕಾರ್ಯನಿರ್ವಹಿಸಿ, ಅವರ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುವುದಾಗಿ ಭರವಸೆ ನೀಡಿದ ಅವರು, ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಬೆಂಬಲಿಸುವಂತೆ ಕೋರಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಆಡಳಿತ ಮಂಡಳಿಯ ಅಧ್ಯಕ್ಷ ಶ್ರೀನಿವಾಸ್ ಹುಯಿಲಗೋಳ ಮಾತನಾಡಿ, ಸಂಸ್ಥೆಯು ಹಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡಿದ್ದು, ಈ ಬಾರಿಯೂ ಕಾಂಗ್ರೆಸ್ ಅಭ್ಯರ್ಥಿ ಮೋಹನ್ ಲಿಂಬಿಕಾಯಿ ಅವರಿಗೆ ಬೆಂಬಲ ನೀಡಲಾಗುವುದು ಎಂದು ಹೇಳಿದರು. ಈ ಭಾಗದ ಶಾಸಕರಾದ ಎಚ್.ಕೆ. ಪಾಟೀಲ ಹಾಗೂ ಡಿ.ಆರ್. ಪಾಟೀಲ ಅವರು ಸಂಸ್ಥೆಯ ಅಭಿವೃದ್ಧಿಗೆ ನೀಡಿರುವ ಸಹಕಾರವನ್ನು ಸ್ಮರಿಸಿದರು.

ಸಭೆಯಲ್ಲಿ ನಿವೃತ್ತ ಪ್ರಾಚಾರ್ಯ ವಿ.ಎಸ್. ಕೊಳ್ಳಿ, ಉಮೇಶ್ ಹಿರೇಮಠ, ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಕೆ. ಲಮಾಣಿ ಸೇರಿದಂತೆ ಶಿಕ್ಷಕರು ಹಾಗೂ ಗಣ್ಯರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka